ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 272 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 20–05–2024 ಸೋಮವಾರ ಪುಟ: 4 ಬೆಲೆ : ರೂ.2–00
Volume - 01 Issue - 272 Title- Code: KARKAN 28269 Chitradurga Date: 20-05-2024 Monday Page: 4 Price: Rs. 2-00

ಒಳಪುಟದ ಸುದ್ದಿಗಳು
ಹವಾಮಾನ ಬದಲಾವಣೆ ಪರಿಣಾಮಗಳು ಕುರಿತು ಪ್ರಬಂಧ ಸ್ಪರ್ಧೆ 2
ವಿಧಾನಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ನಿಶ್ಚಿತ : ಶಾಸಕ ರಘುಮೂರ್ತಿ. 3
ಅನ್ನದಾತನಿಂದ ಹೆಸರು ಸಾವೆ ಹಾಗೂ ಎಳ್ಳು ಬಿತ್ತನೆಗೆ ಭೂಮಿ ಸಿದ್ಧತೆ 4

ಸುದ್ದಿ, ಜಾಹಿರಾತಿಗೆ 9686622252

ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

ಸಂಬಂಧಗಳಲ್ಲಿ ಹೊಂದಾಣಿಕೆ ಕೊರತೆಯಿಂದ ಬಹುಬೇಗ ಬಿರುಕು: ಮಾದಾರಚನ್ನಯ್ಯ ಶ್ರೀ

» ಚಿತ್ರದುರ್ಗ

ಈ ಹಿಂದೆ ಒಂದು ಕಲ್ಯಾಣ ಮಹೋತ್ಸವ ಮಾಡೋದು ಅಂದರೆ ಒಂದು ರೀತಿಯಲ್ಲಿ ಸಂಭ್ರಮ ಮಾಡಿರುತ್ತಿತ್ತು. ನವ ನಾಗರಿಕತೆಯೋ, ಆರ್ಥಿಕ ಸಬಲತೆಯೋ ಅವಿಭಕ್ತ ಕುಟುಂಬಗಳ ಕೊರತೆಯೋ ಏನೋ ಇಂದು ಸಂಬಂಧದಲ್ಲಿ ಬಹುದೊಡ್ಡ ಬಿರಕು ಮತ್ತು ಪರಸ್ಪರರಲ್ಲಿ ಹೊಂದಾಣಿಕೆಯ ಕೊರತೆಯಿಂದ ಬಹುಬೇಗ ಬಿನ್ನಾಭಿಪ್ರಾಯಕ್ಕೆ ಬರುತ್ತಿರುವುದು ಆರೋಗ್ಯಕರ ಸಮಾಜಕ್ಕೆ ನಷ್ಟ ಎಂದು ಶಿವಶರಣ ಮಾದಾರ ಚೆನ್ನಯ್ಯ ಗುರು ಪೀಠದ ಬಸವ ಮೂರ್ತಿ ಮಾದಾರಚನ್ನಯ್ಯ ಸ್ವಾಮೀಜಿ ಅವರು ಆತಂಕ ವ್ಯಕ್ತಪಡಿಸಿದರು.

ಶ್ರೀಗಳವರು ಇಲ್ಲಿನ ಬಸವೇಶ್ವರ ವಧು ವರರ ಮಾಹಿತಿ ಕೇಂದ್ರದ ವತಿಯಿಂದ ನಗರದ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಇಂದು ಏರ್ಪಡಿಸಿದ್ದ ಸರ್ವಧರ್ಮೀರ ವಧುವರರರಾಜ್ಯಮಟ್ಟದಸಮಾವೇಶವನ್ನು ಬಸವೇಶ್ವರರ ಭಾವಚಿತ್ರಕ್ಕೆ ಪುಷ್ಪವೃಷ್ಟಿ ಮಾಡುವುದರ ಮೂಲಕ ನೆರವೇರಿಸಿ ಇಂದು ಸಮಾಜದ ಎಲ್ಲ ವರ್ಗ, ಜಾತಿ, ಧರ್ಮಗಳಲ್ಲಿಯೂ ಎಲ್ಲರ ನಡುವೆ ಸರಿಯಾಗಿ ಸಂಬಂಧವೇರ್ಪಡುತ್ತಿರುವುದೇ ದುಸ್ತರವಾಗಿದೆ. ಸಾವಿರ ಸುಳ್ಳು ಹೇಳಿದ ಮದುವೆಗಳೇ ಆಗಿರಬಹುದು, ಸತ್ಯ ಹೇಳಿ ಮಾಡಿಸಿದವುಗಳೇ ಆಗಿರಬಹುದು ದೊಡ್ಡ ಕಾರಣ ಒತ್ತಟ್ಟಿಗಿರಲಿ, ಸಣ್ಣ ಅಂದರೆ ಊಟದಲ್ಲಿ ವ್ಯತ್ಯಾಸವಾಗಿರುವುದಕ್ಕೆ ಮದುವೆ ಇಂದು ಮುರಿದು ಬೀಳುತ್ತಿವೆ

ಎಂದರೆ ಮನುಷ್ಯನ ಮಾನಸಿಕ ಸ್ಥಿತಿ ಮತ್ತು ಮೌಲ್ಯಗಳು ಯಾವ ಮಟ್ಟಕ್ಕೆ ಕುಸಿದಿವೆ ಎಂಬುದನ್ನು ಅರ್ಥ ಮಾಡಿಕೊಳ್ಳಿ ಎಂದು ಪ್ರಶ್ನಿಸಿದ ಶ್ರೀಗಳು ಹಣ, ಅಧಿಕಾರ ಸತಿಪತಿಗಳಲ್ಲಿ ನಾನು ಹೆಚ್ಚು ಕಡಿಮೆ ಎಂಬ ಭಾವದಿಂದ ಸಂಬಂಧಗಳು ಗಟ್ಟಿಯಾಗಿ ನೆಲೆಯೂರುತ್ತಿಲ್ಲ ಎಂದು ವಿಷಾದಿಸಿದರು. ನಮ್ಮ ನಡೆ ನುಡಿಗೆ ತಕ್ಕ ಬದುಕು ನಮ್ಮದಾಗಬೇಕು. ಹೆಚ್ಚು ಕಡಿಮೆ ಯಾರೂ ಇಲ್ಲ. ಯಾರು ನೂರಕ್ಕೆ ನೂರರಷ್ಟು ಪರಿಪೂರ್ಣರಾಗಿರುವುದಿಲ್ಲ ಒಂದು ಹೆಚ್ಚು, ಕಡಿಮೆ ಇದ್ದೇ ಇರುತ್ತದೆ. ಇಲ್ಲಿ ಪರಸ್ಪರರ ನಡುವೆ ಹೊಂದಾಣಿಕೆ ಮಾಡಿಕೊಂಡು ಸಂಬಂಧ ಗಟ್ಟಿ ಮಾಡಿಕೊಳ್ಳುವತ್ತ ಮನಸ್ಸು ಮಾಡಬೇಕಿದೆ. ಬಸವಣ್ಣನವರ ಸಮಾನತೆಯ ತತ್ವದಡಿಯಲ್ಲಿ ಮತ್ತು ಅವರ ಹೆಸರಿನಲ್ಲೇ ಈ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ. ಮದುವೆ ಹೊಂದಾಣಿಕೆ ಮಾಡಿಕೊಡುವ ಮಧ್ಯವರ್ತಿಗಳ ಕಾರ್ಯ ಇಂದು ಬಹುದೊಡ್ಡದು .ಅವರೇನು ಬಹುದೊಡ್ಡ ನಿರೀಕ್ಷೆಯಿಟ್ಟುಕೊಳ್ಳದೆ ಇದರ ಸಂಚಾಲಕರಾದ ಜಂಬಯ್ಯ ಅವರು ಒಂದು ಜಾತಿಗೆ ಸೀಮಿತಗೊಳಿಸಿದೆ ಸರ್ವಧರ್ಮ, ಜಾತಿಗಳವರ ಸಮಾವೇಶ ಸಂಘಟಿಸಿ ಬಹುದೊಡ್ಡ ಸಂಖ್ಯೆಯಲ್ಲಿ ನಿಮ್ಮನ್ನು ಬರಮಾಡಿಕೊಂಡಿರುವುದು ದೊಡ್ಡತನ ಮತ್ತು ಮಾನವೀಯ ಕೆಲಸ. ಅವರೊಂದಿಗೆ ನೀವು ಸಮಭಾವ ,ಸಮಚಿತ್ತದಿಂದ ವರ್ತಿಸಿ ಬಂದ ಕಾರ್ಯ ಸುಗಮಗೊಳಿಸಿಕೊಂಡು ಹೋಗಬೇಕೆಂದು ಸಲಹೆ ಮಾಡಿದರು.

ಮುಖ್ಯಅತಿಥಿಗಳಾಗಿಆಗಮಿಸಿದ್ದಹಿರಿಯ ಪತ್ರ ಪತ್ರಕರ್ತರಾದ ಗುರುಮೂರ್ತಿ ಅವರು ಮಾತನಾಡಿ ಸಾವಿರ ಸುಳ್ಳು ಹೇಳಿ ಮದುವೆ ಮಾಡಿಕೊಳ್ಳುವುದು ಎಂಬುದರ ಅರ್ಥ ಪ್ರತಿಯೋಬ್ಬರಲ್ಲಿಯೂ ನ್ಯೂನತೆ ಇದ್ದೇ ಇರುತ್ತವೆ. ಅವನ್ನು ಗಣನೆಗೆ ತೆಗೆದುಕೊಳ್ಳದೆ ಸಂಬಂಧ ವೇರ್ಪಡಿಸಿಕೊಳ್ಳುವ ಸಲುವಾಗಿ ಹೇಳಿದ ಮಾತಿದು ಎಂದು ನಾನಾದರೂ ಭಾವಿಸುತ್ತೇನೆ. ಹಾಗೇನೇ ಇವತ್ತು ಮದುವೆ ಮಾಡಿಸುವ ಮಧ್ಯಮವರ್ತಿಯ ಕೆಲಸ ದೊಡ್ಡ ಸವಾಲಿನದು. ಸಂಚಾಲಕ ಜಂಬಯ್ಯನವರು ನಾಡಿನಲ್ಲಿ ಈಗಾಗಲೇ ನೂರಾರು ಮದುವೆಗಳನ್ನು ಮಾಡಿಸಿದ ಹೆಗ್ಗಳಿಕೆ ಅವರದು. ಬಹುತೇಕ ಯಾವುದೇ ಮದುವೆಗಳು ವಿಘಟನೆಗೆ ಕಾರಣವಾದ ನಿದರ್ಶನಗಳಿಲ್ಲ. ಇದಕ್ಕೊಂದು ಈ ವೇದಿಕೆಗೆ ತಾತ್ವಿಕ ತಳಹದಿ ಇದೆ. ಅವರಿಗೊಂದು ಬದ್ಧತೆ ಇದೆ. ಒಂದು ಮಾತು ಹೇಳಬೇಕೆಂದರೆ ಈ ನಾಡಿನ ಬಹುದೊಡ್ಡ ದಲಿತ ಸಾಕ್ಷಿ ಪ್ರಜ್ಞೆ ದೇವನೂರು ಮಹದೇವ ಅವರಂತಹ ಮಗಳ ಮದುವೆ ಮಾಡಿಸಿದ ಹೊಣೆಗಾರಿಕೆ ಜಂಬಯ್ಯ ಅವರ ಮೇಲಿದೆ. ಈಗಿರುವ ಕೆಲ ಮ್ಯಾಟ್ರಿಮೋನಿಗಳು ನಿರುದ್ಯೋಗಿಗಳ ತಾಣಗಳಾಗಿವೆ. ದೊಡ್ಡ ನಗರಗಳಲ್ಲಿ ವ್ಯಾಪಾರಿ ಕೇಂದ್ರಗಳಾಗಿರುವುದು ಸುಳ್ಳಲ್ಲ. ಈ ಮಾಹಿತಿ ಕೇಂದ್ರವು ಆಗಲ್ಲ. ಜಂಬಯ್ಯ ಅವರ ಮೇಲೆ ನಂಬಿಕೆ ವಿಶ್ವಾಸವಿಲ್ಲದಿದ್ದರೆ, ಇಷ್ಟೊಂದು ಸಂಖ್ಯೆಯಲ್ಲಿ ನೀವುಗಳು ಭಾಗವಹಿಸುತ್ತಿರಲಿಲ್ಲ ಎಂಬುದಕ್ಕೆ ಸೇರಿರುವ ನೀವೇ ಸಾಕ್ಷಿ .ಒಳ್ಳೆಯ ಕಾರ್ಯವನ್ನು ಪ್ರಶಂಸೆ ಮಾಡಿದರೆ ಅವರಿಂದ ಇನ್ನಷ್ಟು ,ಮತ್ತಷ್ಟು ಸೇವೆಯನ್ನು ಸಮಾಜ ತೆಗೆದುಕೊಳ್ಳಬಹುದು ಎಂದು ಹೇಳಿದರು.

ಪುಟ 2

ಫಾಸ್ಟ್ ನ್ಯೂಸ್

ಮಳೆ ವರದಿ: ಚಿತ್ರದುರ್ಗ-1ರಲ್ಲಿ 42.8 ಮಿ.ಮೀ ಮಳೆ

» ಚಿತ್ರದುರ್ಗ

ಶುಕ್ರವಾರ ಸಂಜೆ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗ–1ರಲ್ಲಿ 42.8ಮಿ.ಮೀ ಮಳೆಯಾಗಿದೆ. ಇದು ಜಿಲ್ಲೆಯಲ್ಲಿ ಸುರಿದ ಅತ್ಯಧಿಕ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗ–2ರಲ್ಲಿ 9.2ಮಿ.ಮೀ, ಭರಮಸಾಗರದಲ್ಲಿ 4.4ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 30.4ಮಿ.ಮೀ, ಬಾಗೂರಿನಲ್ಲಿ 5.5 ಮಿ.ಮೀ, ಮಾಡದಕೆರೆಯಲ್ಲಿ 13 ಮಿ.ಮೀ, ಮತ್ತೋಡಿನಲ್ಲಿ 3.2ಮಿ.ಮೀ ಹಾಗೂ ಶ್ರೀರಾಂಪುರದಲ್ಲಿ 5.2 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 19.2 ಮಿ.ಮೀ, ರಾಮಗಿರಿಯಲ್ಲಿ 8.4ಮಿ.ಮೀ, ಚಿಕ್ಕಜಾಜೂರಿನಲ್ಲಿ 41.2 ಮಿ.ಮೀ, ಹೆಚ್.ಡಿ.ಪುರದಲ್ಲಿ 36.2ಮಿ.ಮೀ, ತಾಳ್ಯದಲ್ಲಿ 4.2ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಇಕ್ಕನೂರಿನಲ್ಲಿ 22.4ಮಿ.ಮೀ, ಈಶ್ವರಗೆರೆಯಲ್ಲಿ 5.8 ಮಿ.ಮೀ ಮಳೆಯಾಗಿದೆ. 8 ಮನೆಗಳು ಭಾಗಶಃ ಹಾನಿ: ಶುಕ್ರವಾರ ರಾತ್ರಿ ಸುರಿದ ಮಳೆಗೆ ಜಿಲ್ಲೆಯಾದ್ಯಂತ ಭಾಗಶಃ 8 ಮನೆಗಳು ಹಾಗೂ 0.54 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಚಿತ್ರದುರ್ಗ ತಾಲ್ಲೂಕಿನಲ್ಲಿ 1ಭಾಗಶಃ ಮನೆಹಾನಿಯಾಗಿದೆ. ಹೊಸದುರ್ಗ ತಾಲ್ಲೂಕಿನಲ್ಲಿ 2 ಮನೆಗಳು ಭಾಗಶಃ ಹಾನಿಯಾಗಿವೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ ಭಾಗಶಃ 1 ಮನೆ ಹಾಗೂ 0.14 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಹಿರಿಯೂರು ತಾಲ್ಲೂಕಿನಲ್ಲಿ ಭಾಗಶಃ 4 ಮನೆ ಮತ್ತು 0.40 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ .

ಚಿತ್ರದುರ್ಗ: ಮೇ.22ರಂದು ನೇರ ನೇಮಕಾತಿ ಸಂದರ್ಶನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದೇ ಮೇ.22ರಂದು ನೇರ ನೇಮಕಾತಿ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಈ ಸಂದರ್ಶನದಲ್ಲಿ ವಿವಿಧ ಖಾಸಗಿ ಕಂಪನಿಗಳು ಖಾಲಿ ಇರುವ ಹುದ್ದೆಗಳಿಗೆ ಪುರುಷ, ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿವೆ. ಚಿತ್ರದುರ್ಗ ನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಮೇ.22ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ರವರೆಗೆ ನೇರ ಸಂದರ್ಶನ ನಡೆಯಲಿದೆ. ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೊಮಾ, ಐಟಿಐ ಅಥವಾ ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನವರು ಪಾಲ್ಗೊಳ್ಳಬಹುದು. ಸಂದರ್ಶನಕ್ಕೆ ಆಗಮಿಸುವವರು 5 ಪ್ರತಿ ಬಯೋಡಾಟಾ, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಹಾಗೂ ಇತ್ತೀಚಿನ ಫೋಟೋಗಳನ್ನು ತಮ್ಮೊಂದಿಗೆ ತರಬೇಕು. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ನಗರದ ಸ್ಟೇಡಿಯಂ ರಸ್ತೆಯಲ್ಲಿನ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಹಾಗೂ ದೂರವಾಣಿಸಂಖ್ಯೆ 7022459064,8105619020 ಹಾಗೂ 9945587060 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ವಿದ್ಯುತ್ ವ್ಯತ್ಯಯ

» ದಾವಣಗೆರೆ

ದಾವಣಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಎಫ್–2 ಎಂ.ಸಿ.ಸಿ.ಬಿ, ಫೀಡರ್‌ನಲ್ಲಿ ದಾವಣಗೆರೆ ನಗರದ ಮಹಾನಗರ ಪಾಲಿಕೆ ವತಿಯಿಂದ ಒಳಚರಂಡಿ ಕಾಮಗಾರಿ ನಿರ್ವಹಿಸಬೇಕಾಗಿರುವುದರಿಂದ ಮೇ.20 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಎಂ.ಸಿ.ಸಿ.ಬಿ ಎಫ್.2 ಫೀಡರ್ ವ್ಯಾಪ್ತಿಯ ಸಿದ್ದವೀರಪ್ಪ ಬಡಾವಣೆಯ 10, 11, ಮತ್ತು 12ನೇ ಕ್ರಾಸ್ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಡಿ.ಟಿ.ಶ್ರೀನಿವಾಸ್‌ಗೆ ಮೊದಲ ಆದ್ಯತೆ ಮತ ನೀಡಿ

» ಚಳ್ಳಕೆರೆ

ಆಗ್ನೇಯ ಶಿಕ್ಷಕ ಕ್ಷೇತ್ರದ ಚುನಾವಣೆ ಜೂನ್–3ರಂದು ನಡೆಯಲಿದ್ದು, ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್‌ಪರ ಕ್ಷೇತ್ರದ ಶಾಸಕರು, ಕರ್ನಾಟಕ ಸಣ್ಣ ಕೈಗಾರಿಕೆ ಅಭಿವೃದ್ಧ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ನಗರದ ಸರ್ಕಾರಿ ಪದವಿಪೂರ್ವ ಕಾಲೇಜು ಹಾಗೂ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ತೆರಳಿ ಅಭ್ಯರ್ಥಿ ಪರ ಮತಯಾಚನೆ ಮಾಡಿದರು.

ಕಳೆದ ಸುಮಾರು ಒಂದು ವರ್ಷಗಳಿಂದ ಪ್ರಸ್ತುತ ರಾಜ್ಯ ಸರ್ಕಾರ ಅನೇಕ ಜನಪರ ಯೋಜನೆಗಳನ್ನು ಜಾರಿಗೊಳಿಸಿದೆ. ವಿಶೇಷವಾಗಿ ನಿರುದ್ಯೋಗಿ ಯುವಕ, ಯುವತಿಯರಿಗೆ ಯುವನಿಧಿ ಯೋಜನೆ, ಮಹಿಳೆಯರಿಗೆ ಶಕ್ತಿಯೋಜನೆ, ಗೃಹಲಕ್ಷ್ಮಿ, ಉಚಿತ ವಿದ್ಯುತ್ ಯೋಜನೆಯ ಗೃಹಜ್ಯೋತಿ ಮುಂತಾದ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಜನಸಾಮಾನ್ಯರ ಬದುಕನ್ನು ಶ್ರೀಮಂತಗೊಳಿಸಿದೆ. ರಾಜ್ಯದ ಕಾಂಗ್ರೆಸ್ ಪಕ್ಷದ ಆಡಳಿತಕ್ಕೆ ರಾಷ್ಟ್ರದಲ್ಲೇ ಮೆಚ್ಚುಗೆ ವ್ಯಕ್ತವಾಗಿದೆ. ವಿಧಾನಪರಿಷತ್‌ನಲ್ಲೂ ಸಹ ಪಕ್ಷದ ಬಲವನ್ನು ಹೆಚ್ಚಿಸಲು ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್‌ಗೆ ಮತ ನೀಡಿ ಎಂದರು.

ಹಿರಿಯೂರು ಕ್ಷೇತ್ರದ ಮಾಜಿ ಶಾಸಕ ಪೂರ್ಣಿಮಾಶ್ರೀನಿವಾಸ್ ಮಾತನಾಡಿ,



ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಕಳೆದ ಬಾರಿಯೂ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರು. ಶಿಕ್ಷಕರ ಹಲವಾರು ಸಮಸ್ಯೆಗಳ ಬಗ್ಗೆ ಅಪಾರವಾದ ಅನುಭವ ಹೊಂದಿದ್ದಾರೆ. ಸರ್ಕಾರದಿಂದ ಶಿಕ್ಷಕರಿಗೆ ಸಿಗಬೇಕಾದ ಎಲ್ಲಾ ಸೌಲಭ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ಅವರು ಗೆಲುವು ಸಾಧಿಸಿದರೆ ಶಿಕ್ಷಕರ ಜ್ವಲಂತ ಸಮಸ್ಯೆಗಳಿಗೆ ಮುಕ್ತಿ ಹಾಡುವರು. ಎಲ್ಲಾ ಶಿಕ್ಷಕ ಬಂಧುಗಳು ಡಿ.ಟಿ.ಶ್ರೀನಿವಾಸ್‌ಗೆ ಮತ ನೀಡುವಂತೆ ಮನವಿ ಮಾಡಿದರು.ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಮಂಜುನಾಥ, ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲಎಂ.ರವೀಶ್‌ಕುಮಾರ್,ಕೆ.ಚಿತ್ತಯ್ಯ, ಜಿ.ವಿ.ರಾಜಣ್ಣ, ರಘುನಾಥ, ವಿನೇಶ್, ಎಚ್. ತಿಪ್ಪೇಸ್ವಾಮಿ, ಹಬಿಬುಲ್ಲಾ, ಬಿ.ಶಾಂತಕುಮಾರಿ, ಪುಷ್ಪಲತಾ, ಬೆಳಗಟ್ಟನಾಗರಾಜು ಮುಂತಾದವರು ಉಪಸ್ಥಿತರಿದ್ದರು

ಧಾರಾಕಾರವಾಗಿ ಸುರಿದ ಮಳೆಗೆ ಮೈದುಂಬಿ ಹರಿದ ಕೆಲ್ಲೋಡ್ ಬ್ಯಾರೇಜ್

» ಹೊಸದುರ್ಗ

ತಾಲೂಕಿನ ಹಲವು ಕಡೆಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯ ಹಲವೆಡೆಗಳಲ್ಲಿ ಶನಿವಾರ ರಾತ್ರಿ ಸುರಿದ ಧಾರಾಕಾರ ಮಳೆಯಿಂದಾಗಿ ವೇದಾವತಿ ನದಿ ಮೈದುಂಬಿ ಕೆಲ್ಲೋಡ್ ಬ್ಯಾರೇಜ್ ಭರ್ತಿಯಾಗಿ ಹರಿಯುತ್ತಿದ್ದು, ಜಿಲ್ಲೆಯ ರೈತರ ಮೊಗದಲ್ಲಿ ಸಂತಸ ಮೂಡಿದೆ.

ಚಿತ್ರದುರ್ಗ ಜಿಲ್ಲೆಯ 6 ತಾಲೂಕುಗಳನ್ನು ಕೂಡ ಸರ್ಕಾರ ಬರಪೀಡಿತ ಪ್ರದೇಶವೆಂದು ಘೋಷಿಸಿತ್ತು. ಈ ಭಾಗದ ರೈತರ ಜಮೀನುಗಳಲ್ಲಿ ಬರುತ್ತಿದ್ದ ನೀರು ಬತ್ತಿ ಹೋಗಿ ತೋಟಗಳು ಒಣಗಿ ನಿಲ್ಲುವ ಹಂತಕ್ಕೆ ಬಂದಿದ್ದವು. ಮಳೆ ಬರುವುದನ್ನೇ ಕಾಯುತ್ತಾ ರೈತರು ಮುಗಿಲು ನೋಡುತ್ತಿದ್ದರು. ರೈತರ ಪ್ರಾರ್ಥನೆ ಕೊನೆಗೂ ಫಲಿಸಿದ್ದು, ವರುಣಾದೇವ ಕೃಪೆ ತೋರಿದ್ದಾನೆ. ಹೊಸದುರ್ಗ ಪಟ್ಟಣದ ಸುತ್ತಮುತ್ತ 120.6 ಮಿ.ಮೀ, ಬಾಗೂರು 40.3 ಮಿ.ಮೀ, ಮಾಡದಕೆರೆ 51.2 ಮಿ.ಮೀ, ಮತ್ತೋಡು 14.4 ಮಿ.ಮೀ, ಶ್ರೀರಾಂಪುರ 15.0 ಮಿ.ಮೀ ಮಳೆಯಾಗಿದೆ.

ಪ್ರಮುಖ ಸುದ್ದಿ

ಮನುಷ್ಯನಲ್ಲಿ ರಕ್ತದೊತ್ತಡ, ಸಕ್ಕರೆಕಾಯಿಲೆ ಸರ್ವೆ ಸಾಮಾನ್ಯ

» ಚಿತ್ರದುರ್ಗ

ಆರೋಗ್ಯಕ್ಕಿಂತ ಮಿಗಿಲಾದ ಸಂಪತ್ತು ಬೇರೊಂದಿಲ್ಲ. ಹಾಗಾಗಿ ಪ್ರತಿಯೊಬ್ಬರು ಆರೋಗ್ಯದ ಕಡೆ ಗಮನ ಕೊಡಬೇಕೆಂದು ಹೆರಿಗೆ ಮತ್ತು ಸ್ತ್ರೀ ರೋಗ ತಜ್ಞೆ ಡಾ. ಚೈತ್ರ ರವಿ ಹೇಳಿದರು.

ರೋಟರಿ ಕ್ಲಬ್ ಚಿತ್ರದುರ್ಗ, ಬಸಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಸಹಯೋಗದೊಂದಿಗೆ ಎಸ್.ಆರ್.ಬಿ.ಎಂ.ಎಸ್. ರೋಟರಿ ಬಾಲ ಭವನದಲ್ಲಿ ಭಾನುವಾರ ನಡೆದ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು.ರಕ್ತದೊತ್ತಡ, ಸಕ್ಕರೆ ಕಾಯಿಲೆ ಸರ್ವೆ ಸಾಮಾನ್ಯವಾಗಿಬಿಟ್ಟಿದೆ. ಇದಕ್ಕೆ ಒತ್ತಡದ ಜೀವನ ಕಾರಣ. ಆರೋಗ್ಯದ ಬಗ್ಗೆ ಯಾರು ನಿರ್ಲಕ್ಷೆ ಮಾಡಬಾರದು. ಇಂತಹ ಉಚಿತ ಆರೋಗ್ಯ

ತಪಾಸಣಾ ಶಿಬಿರಗಳಲ್ಲಿ ಭಾಗವಹಿಸಿ ಚಿಕಿತ್ಸೆ ಪಡೆದುಕೊಳ್ಳುವುದು ಉತ್ತಮ. ಬಸಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಎಲ್ಲಾ ರೀತಿಯ ಸೌಲಭ್ಯಗಳು ಹಾಗೂ ಸರ್ಕಾರದ ಸ್ಕೀಂಗಳಿವೆ. ಸಾರ್ವಜನಿಕರು ಪ್ರಯೋಜನ ಪಡೆದುಕೊಳ್ಳಿ ಎಂದು ಸಲಹೆ ನೀಡಿದರು.ರೋಟರಿ ಕ್ಲಬ್ ಅಧ್ಯಕ್ಷ ರೊ.ಕನಕರಾಜ್ ಮಾತನಾಡುತ್ತ ವಿವಿಧ ಆಸ್ಪತ್ರೆಗಳ ವೈದ್ಯರುಗಳನ್ನು ಸಂಪರ್ಕಿಸಿ ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಉಚಿತ ಆರೋಗ್ಯ ತಪಾಸಣೆಯನ್ನು ಮಾಡಿಸುತ್ತಿದ್ದೇವೆ. ಎಲ್ಲರೂ ದೊಡ್ಡ ದೊಡ್ಡ ನಗರಗಳಿಗೆ ಹೋಗಿ ತಪಾಸಣೆ ಮಾಡಿಸಿಕೊಂಡು ಚಿಕಿತ್ಸೆ ಪಡೆಯುವುದು ಕಷ್ಟ. ಅದಕ್ಕಾಗಿ ಇಂತಹ ಶಿಬಿರಗಳ ಪ್ರಯೋಜನ ಪಡೆದುಕೊಳ್ಳಿ ಎಂದು ಜನತೆಯಲ್ಲಿ ಮನವಿ ಮಾಡಿದರು.

ಪ್ರತಿ ತಿಂಗಳು ಕಣ್ಣಿನ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸೆ ಕ

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5830
85 ಕೆಡಿಎಂ (ಗ್ರಾಂ)	5330

ಬೆಳ್ಳಿ ಬೆಲೆ	
ಕೆಜಿ	67500

25 ವರ್ಷಕ್ಕೆ ಶಿವಶಿಂಪಿ ಸಮಾಜ ಪಾದಾರ್ಪಣೆ

» ಚಿತ್ರದುರ್ಗ

ಜಿಲ್ಲೆಯಲ್ಲಿ ಶಿವಶಿಂಪಿ ಸಮಾಜ 25 ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿದೆ. ಈ ಕ್ಷಣವನ್ನು ಅವಿಸ್ಮರಣೀಯಗೊಳಿಸಬೇಕು ಎಂದು ಜಿಲ್ಲಾ ಲಿಂಗಾಯತ ಶಿವಶಿಂಪಿ ಸಮಾಜದ 2023–24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾ ಸಭೆಯಲ್ಲಿ ತೀರ್ಮಾನಿಸಲಾಯಿತು.

ನಗರದ ಶ್ರೀ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ, ನಮ್ಮ ಸಮಾಜ 2000–2001ನೇ ಸಾಲಿನಲ್ಲಿ ಪ್ರಾರಂಭವಾಗಿದದ್ದು, ಇಂದಿಗೆ 25 ವರ್ಷ ತುಂಬಿದೆ. ಈ ಹಿನ್ನಲೆಯಲ್ಲಿ ಈ ವರ್ಷದ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಣೆ ಮಾಡಬೇಕು. ಇದಕ್ಕೆ ಬೇಕಾದ ತಯಾರಿಯನ್ನು ಇಂದಿನಿಂದಲೇ ಮಾಡಿಕೊಳ್ಳಬೇಕು ಎಂದು ಸದಸ್ಯರು ನಿರ್ಧರಿಸಿದರು.

ಈ ವರ್ಷದ ಪ್ರತಿಭಾ ಪುರಸ್ಕಾರದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ.85 ರಷ್ಟು ಅಂಕಗಳನ್ನು ಪಡೆದ ಪ್ರತಿಭಾವಂತ ಚಿತ್ರದುರ್ಗ ಜಿಲ್ಲೆಯ ಶಿವಶಿಂಪಿ ಸಮಾಜದ ವಿದ್ಯಾರ್ಥಿಗಳನ್ನು ಸನ್ಮಾನಿಸಲು ತಿರ್ಮಾನಿಸಿದ್ದು,

ಇದರೊಂದಿಗೆ ನಮ್ಮ ಸಮಾಜದಲ್ಲಿ ವಿವಿಧ ರೀತಿಯ ಸಾಧನೆಯನ್ನು ಮಾಡಿದ ವಯಸ್ಸಿನ ಮಿತಿ ಇಲ್ಲದೆ ಯಾರು ಬೇಕಾದರೂ ಹೆಸರನ್ನು ನೀಡಬಹುದಾಗಿದೆ.

ಇದ್ದಲ್ಲದೆ ಕಾರ್ಯಕ್ರಮಕ್ಕೆ ಹೆಚ್ಚಿನ ರೀತಿಯಲ್ಲಿ ಧನ ಸಹಾಯ ಮಾಡಿದವರನ್ನು ಕಾರ್ಯಕ್ರಮದಲ್ಲಿ ಸನ್ಮಾನ ಮಾಡಲು ತೀರ್ಮಾನ ಮಾಡಲಾಯಿತು.

ಸಮಾಜದ ಕಾರ್ಯದರ್ಶಿ ಇ.ಕೆ. ಮಲ್ಲಿಕಾರ್ಜನರವರು, ಹಿಂದಿನ ಮಹಾಸಭೆಯ ನೋಟಿಸ್‌ನ್ನು ಓದಿ 2023–24ನೇ ಸಾಲಿನ ಜಮಾ–ಖರ್ಚು ಹಾಗೂ 2024–25ನೇ ಸಾಲಿನ ಮುಂಗಡ ಜಮಾ–ಖರ್ಚುನ್ನು ಮಂಡನೆ ಮಾಡಿದರು. 2024ರ ಕುಲಗುರು ಶ್ರೀ ಶಿವದಾಸಿಮಯ್ಯ ಜಯಂತ್ಯೋತ್ಸವಕ್ಕೆ ದಿನಾಂಕ ನಿಗಧಿಯ ಬಗ್ಗೆ ಮುಂದಿನ ಕಾರ್ಯಾಕಾರಿ ಸಮಿತಿಯ ಸಭೆಯಲ್ಲಿ ತೀರ್ಮಾನಿಸಲು ನಿರ್ಧಾರ ಮಾಡಲಾಯಿತು.

ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಸಮಾಜದ ಅಧ್ಯಕ್ಷರಾದ ಇ.ಎಸ್. ಜಯದೇವ ಮೂರ್ತಿಯವರು ಮಾತನಾಡಿ, ಕಳೆದ ಎರಡು ವರ್ಷಗಳಿಂದ ನಿಮ್ಮಗಳ ಸಹಕಾರದಿಂದ ಶಿವದಾಸಿಮಯ್ಯರವರು ಜಯಂತೋತ್ಸವ ಹಾಗೂ ಪ್ರತಿಭಾ ಪುರಸ್ಕಾರವನ್ನು ಅದ್ದೂರಿಯಾಗಿ ಮಾಡಲಾಗಿದೆ. ಇದಕ್ಕೆ ಸಹಾಯ ಮಾಡಿದವರನ್ನು ಈಗ ನೆನೆಯ ಬೇಕಿದೆ ಇದೇ ರೀತಿ ಮುಂದಿನ ದಿನದಲ್ಲಿ ಸಮಾಜದ ಪ್ರಗತಿಗೆ ಎಲ್ಲರು ಸಹಾ ಸಹಕಾರ ನೀಡಬೇಕಿದೆ. ಈ ವರ್ಷ ನಮ್ಮ ಸಮಾಜ 25ನೇ ವರ್ಷ ಪ್ರಾರಂಭವಾಗಲಿದ್ದು, ಇದರ ಏಳ್ಗೆಗೆ ಎಲ್ಲರು ಸಹಾ ಸಹಕಾರ ಮಾಡಿದ್ದಾರೆ ಇದರಲ್ಲಿ ಸಮಾಜದ ಹಿರಿಯರಾದ ಷಣ್ಮುಖಪ್ಪರವರ ನೆರವು ಹೆಚ್ಚಿನ ರೀತಿಯಲ್ಲಿ ಇದೆ ಎಂದರು.

ನಮ್ಮ ಸಮಾಜದ ಪ್ರಗತಿಗೆ ಮಹಿಳಾ ಘಟಕದ ಸಹಕಾರ ಹೆಚ್ಚಿನ ರೀತಿಯಲ್ಲಿ ಇದೆ, ಅವರು ಪ್ರತಿ ತಿಂಗಳು ಕಾರ್ಯಕ್ರಮವನ್ನು ಮಾಡುವುದರ ಮೂಲಕ ರಾಜ್ಯದಲ್ಲಿ ಉತ್ತಮ ಮಹಿಳಾ ಘಟಕ ಎಂದು ಹೆಸರು ಪಡೆದಿದ್ದಾರೆ.

ನಮ್ಮಲ್ಲಿ ಯುವ ಜನತೆ ಹೆಚ್ಚಾಗಿ ಸಮಾಜದ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿಲ್ಲ, ಇದು ದುರಂತವಾಗಿದೆ ನಮ್ಮ ಸಮಾಜದ ಮುಂದಿನ ನಾಯಕರಾದ ಯುವ ಜನತೆ ಹೆಚ್ಚಾಗಿ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕಿದೆ, ಬೇರೆ ಸಮಾಜದವರನ್ನು ನೋಡಿದರೆ ನಮಗೆ ನಮ್ಮ ಸಂಘಟನೆಯನ್ನು ಇನ್ನೂ ಹೆಚ್ಚಿನ ರೀತಿಯಲ್ಲಿ ಬಲಪಡಿಸಬೇಕಿದೆ ಎಂದು ಜಯದೇವಮೂರ್ತಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಕಳೆದ ಒಂದು ವರ್ಷದಲ್ಲಿ ನಿಧನರಾದ ನಮ್ಮ ಸಮಾಜದ ಭಾಂದವರಿಗೆ ಒಂದು ನಿಮಿಷ ಮೌನವನ್ನು ಆಚರಿಸುವುದರ ಮೂಲಕ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು. ಸಮಾಜದಗೌರವಾಧ್ಯಕ್ಷಡಿ.ಬಿ.ಶಿವಹಾಲಪ್ಪ, ಉಪಾಧ್ಯಕ್ಷ ಎಸ್.ವಿರೇಶ್, ಖಜಾಂಚಿ ನಿರ್ಮಲ ಬಸವರಾಜು, ಮಹಿಳಾ ಘಟಕದ ಅಧ್ಯಕ್ಷೆ ಅನಿತಾ ಮುರುಗೇಶ್, ಕವಿತಾ ವಿರೇಶ್, ಪ್ರಚಾರ ಸಂಚಾಲಕ ಸುರೇಶ್ ಪಟ್ಟಣ್ ಇದ್ದರು.

ಖಾಸಗಿ ಶಾಲೆಗಳಲ್ಲಿ ಪ್ರವೇಶ ಶುಲ್ಕ ಹೆಚ್ಚಳ: ಖಂಡನೆ

» ಚಿತ್ರದುರ್ಗ

ನಗರದ ಖಾಸಗಿ ಶಾಲೆಗಳಲ್ಲಿ ವರ್ಷದಿಂದ ವರ್ಷಕ್ಕೆ ಪ್ರವೇಶ ಶುಲ್ಕವನ್ನು ಹೆಚ್ಚಳ ಮಾಡುತ್ತಿದ್ದು, ಇದರಿಂದ ಬಡ ಹಾಗೂ ಮಧ್ಯಮ ವರ್ಗದವರು ತಮ್ಮ ಮಕ್ಕಳಿಗೆ ಶಿಕ್ಷಣವನ್ನು ಕೂಡಿಸಲಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಈ ಹಿನ್ನಲೆಯಲ್ಲಿ ಸರ್ಕಾರ ಮಧ್ಯ ಪ್ರವೇಶ ಮಾಡುವುದರ ಮೂಲಕ ಸರಿಯಾದ ರೀತಿಯಲ್ಲಿ ಪ್ರವೇಶ ಶುಲ್ಕವನ್ನು ನಿಗಧಿ ಮಾಡುವಂತೆ ಆಮ್ ಆದ್ಮಿ ಪಾರ್ಟಿಯ ಜಿಲ್ಲಾಧ್ಯಕ್ಷರಾದ ಬಿ.ಈ.ಜಗದೀಶ್ ಒತ್ತಾಯಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನದಲ್ಲಿ ಎಲ್ಲಾ ಪೋಷಜಕರು ಸಹಾ ತಮ್ಮ ಮಕ್ಕಳು ಖಾಸಗಿ ಶಾಲೆಯನ್ನು ಓದಬೇಕೆಂದು ಇಷ್ಟ ಪಡುತ್ತಿದ್ದಾರೆ ಇದನ್ನೇ ಬಂಡವಾಳವನ್ನಾಗಿ ಮಾಡಿಕೊಂಡಿರುವ ಖಾಸಗಿ ಶಾಲೆಯ ಆಡಳಿತ ಮಂಡಳಿಯವರು ಪ್ರತಿ ವರ್ಷ ತಮ್ಮ ಶಾಲೆಯ ಪ್ರವೇಶ ಶುಲ್ಕವನ್ನು 15 ರಿಂದ 20 ರಷ್ಟು ಹೆಚ್ಚಳ ಮಾಡುತ್ತಿದ್ದಾರೆ. ಇದರಿಂದ ಬಡ ಹಾಗೂ ಮಧ್ಯಮ ವರ್ಗದವರಿಗೆ ಹೊರೆಯಾಗುತ್ತಿದೆ ಇದನ್ನು ತಪ್ಪಿಸಿ ಬಡ ಹಾಗೂ ಮಧ್ಯಮ ವರ್ಗದವರಿಗೆ ಹೊರೆಯಾಗದ ರೀತಿಯಲ್ಲಿ ನಿಗಧಿತ ಶುಲ್ಕವನ್ನು ಮಾತ್ರ ಪಡೆಯುವಂತೆ ಸರ್ಕಾರ ಮಧ್ಯ ಪ್ರವೇಶ ಮಾಡುವುದರ ಮೂಲಕ ಶುಲ್ಕವನ್ನು ನಿಗಧಿ ಮಾಡುವಂತೆ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಸರ್ಕಾರ ನಡೆಸುತ್ತಿರುವ ಶಾಲೆಗಳನ್ನು ಸರಿಯಾದ ರೀತಿಯಲ್ಲಿ ನೋಡಿಕೊಳ್ಳಬೇಕಿದೆ, ಇದಕ್ಕೆ ಅಗತ್ಯವಾಗಿ ಬೇಕಾದ ಮೂಲಭೂತ ಸೌಲಭ್ಯಗಳನ್ನು ನೀಡಬೇಕಿದೆ. ಇದರೊಂದಿಗೆ ಸರ್ಕಾರಿ ಶಾಲೆಯಲ್ಲಿ ಓದಿದವರಿಗೆ ಇಂತಿಷ್ಟು ಸೌಲಭ್ಯಗಳನ್ನು ಸರ್ಕಾರ ನೀಡಲು ಮುಂದಾಗಬೇಕಿದೆ. ಆಗ ಮಾತ್ರ ಸರ್ಕಾರಿ ಶಾಲೆಗಳಿಗೆ ಬೇಡಿಕೆ ಬರಲು ಸಾಧ್ಯವಿದೆ. ಸರ್ಕಾರ ಮತ್ತು ಜಿಲ್ಲಾಡಳಿತ ಖಾಸಗಿ ಶಾಲೆಗಳ ಪ್ರವೇಶ ಶುಲ್ಕಕ್ಕೆ ಸಂಬಂಧಪಟ್ಟಂತೆ ನಿಗಧಿ ಮಾಡಲು ಸಮಿತಿಯನ್ನು ರಚನೆ ಮಾಡುವುದರ ಮೂಲಕ ಸರಿಯಾದ ರೀತಿಯಲ್ಲಿ ಮಾನದಂಡವನ್ನು ಬಳಸಿ ಶುಲ್ಕವನ್ನು ನಿಗಧಿ ಮಾಡುವಂತೆ ಒತ್ತಾಯಿಸಿದ್ದಾರೆ.

ಗೋಷ್ಠಿಯಲ್ಲಿ ಸೈಯದ್ ಷಾ ತನ್ವಿರ್, ಆಕ್ಬರ್ ಖಾನ್, ರವಿ. ವಿಜಯ, ಹಾಗೂ ಜಬೀವುಲ್ಲಾ ಉಪಸ್ಥಿತರಿದ್ದರು.

ಸಂಬಂಧಗಳಲ್ಲಿ ಹೊಂದಾಣಿಕೆ ಕೊರತೆಯಿಂದ ಬಹುಬೇಗ ಬಿರುಕು

» ಮೊದಲ ಪುಟದಿಂದ

ಸಮಾವೇಶದಲ್ಲಿ ಮತ್ತೋರ್ವ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಬಾಪೂಜಿ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಹಾಗೂ ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷರಾದ ಡಾ. ಕೆ.ಎಮ್. ವೀರೇಶ್ ಅವರು ಮಾತನಾಡಿ ಇಂದು ಒಂದು ಚಿಕ್ಕ ಕುಟುಂಬ ಅಂದರೆ ಗಂಡ ಹೆಂಡತಿ ಮಗು ಒಟ್ಟಿಗೆ ಇರುವುದೇ ಒಂದು ಅವಿಭಕ್ತ ಕುಟುಂಬ ಎಂದು ಹೇಳಿಕೊಳ್ಳಬೇಕಿದೆ. ಕಾರಣ ಸಂಬಂಧ ಅಷ್ಟೊಂದು ಸಂಕೀರ್ಣಗೊಂಡಿದೆ.ಊಣಲು ಉಡಲು ಕೊರತೆಯಿದ್ದ ಸಂದರ್ಭದಲ್ಲಿ ಸಂಬಂಧಗಳು ಅನ್ಯೋನ್ಯವಾಗಿದ್ದವು. ಈಗ ಅವೆಲ್ಲ ಸರಿ ಇದ್ದರೂ ನಮ್ಮಲ್ಲಿ ಸ್ವಾರ್ಥ, ಅಹಂಕಾರ, ದ್ವೇಷದ ಕಾರಣದಿಂದ ಸಂಬಂಧಗಳು ಜಟಿಲ ಸಮಸ್ಯೆಗಳಾಗಿ ಪರಿಣಮಿಸಿ ವಿಘಟನೆಗೆ ಕಾರಣವಾಗಿದೆ ಎಂದು ಹೇಳಿದ ಅವರು ಪ್ರತಿ ಹಂತದಲ್ಲಿ ಎಲ್ಲಾ ಕ್ಷೇತ್ರದಲ್ಲಿಯೂ ಬಹುತೇಕ ವಾತಾವರಣ ಕಲುಷಿತಗೊಂಡಿದೆ. ಇದಕ್ಕೆ ವರ್ಗರಹಿತ ಸಮಾಜ ಕಟ್ಟ ಬಯಸಿದ ಬಸವಾದಿ ಶಿವ ಶರಣರ ಮೌಲ್ಯಗಳಲ್ಲಿ ಮದ್ದು ಇದೆ . ಅದನ್ನು ಆಧರಿಸಿ, ಆಚರಿಸಿದಾಗ ಸದೃಢ ಸಮಾಜ ನಿರ್ಮಾಣವಾಗಲು ಸಾಧ್ಯವಿದೆ ಎಂದು ಪ್ರತಿಪಾದಿಸಿದರು. ವೇದಿಕೆಯಲ್ಲಿ ಸಮಾವೇಶ ಸಂಘಟಕರೂ, ಮಾಹಿತಿ ಕೇಂದ್ರದ ವ್ಯವಸ್ಥಾಪಕರು ಆದ ಜೆ.ಎಂ. ಜಂಬಯ್ಯ ಅವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ರಾಜ್ಯದ ನಾನಾ ಜಿಲ್ಲೆಗಳಿಂದ ವಿವಿಧ ಜಾತಿ, ಧರ್ಮದ ಆಸಕ್ತರು ಭಾಗವಹಿಸಿ ತಮ್ಮ ತಮ್ಮ ಪರಿಚಯವನ್ನು ಮಾಡಿಕೊಂಡು ಮುಂದಿನ ನಡೆಯ ಬಗ್ಗೆ ಮಾಹಿತಿ ಪಡೆದುಕೊಂಡರು. ಸಮಾರಂಭದ ಆರಂಭಕ್ಕೆ ಸಂಗೀತ ಶಿಕ್ಷಕಿ ಜ್ಯೋತಿಗಿರೀಶ್ ವಚನ ಪ್ರಾರ್ಥನೆ ಮಾಡಿದರು. ಮಹಂತೇಶ್ ನಿಟುವಳ್ಳಿ, ಸ್ವಾಗತಿಸಿದರು. ಉಪನ್ಯಾಸಕ ಪಿ. ಬಸವರಾಜಪ್ಪ ಕಾರ್ಯಕ್ರಮ ನಿರ್ವಹಿಸಿ ಕೊನೆಯಲ್ಲಿ ವಂದಿಸಿದರು. ಈ ಸಂದರ್ಭದಲ್ಲಿ ಸಮಾವೇಶದ ಸಂಘ ‘ಟನೆಯ ಭಾಗವಾಗಿ ಕೆಲಸ ಮಾಡಿದವರು ಬಿ.ಎಲ್. ಶಿವಾನಂದ ಸ್ವಾಮಿ, ಬಸವನಗೌಡ ,ಈ.ಗೋಪಿನಾಥ ,ಬಿ ಲೋಕೇಶ್ ಗದಿಗಯ್ಯಾ ಕಿತ್ತೂರು ಮಠ ಮತ್ತಿತರರು ಉಪಸ್ಥಿತರಿದ್ದರು.

ಹೊಸದುರ್ಗದಲ್ಲಿ ಸಂಭ್ರಮದ ವಾಸವಿ ಜಯಂತಿ

ಹೊಸದುರ್ಗ: ಪಟ್ಟಣದ ವಾಸವಿ ರಸ್ತೆಯಲ್ಲಿರುವ ಶ್ರೀ ವಾಸವಿ ಕನ್ನಿಕಾ ಪರಮೇಶ್ವರಿ ದೇವಸ್ಥಾನದಲ್ಲಿ ಶನಿವಾರ ವಾಸವಿ ಜಯಂತಿ ಕಾರ್ಯಕ್ರಮ ನಿಮಿತ್ತವಾಗಿ ಅಮ್ಮನವರಿಗೆ ವಿಶೇಷ ಅಲಂಕಾರ ಮಾಡುವುದರೊಂದಿಗೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಸಂಭ್ರಮದಿಂದ ಜಯಂತಿಯನ್ನು ಆಚರಣೆ ಮಾಡಲಾಯಿತು. 4,634 ನೇ ವಾಸವಿ ಜಯಂತಿಯ ಪ್ರಯುಕ್ತ ಹೊಸದುರ್ಗದ ವಾಸವಿ ಕನ್ನಿಕಾ ಪರಮೇಶ್ವರಿ ದೇವಸ್ಥಾನದಲ್ಲಿ ಬೆಳಿಗ್ಗೆಯಿಂದಲೇ ತಾಯಿಗೆ ನೋಟಿನಲ್ಲಿ, ಚಿಲ್ಲರೆಯಲ್ಲಿ, ನವಧಾನ್ಯಗಳಲ್ಲಿ ಹಾಗೂ ಡ್ರೈ ಫ್ರೂಟ್ಸ್ ನ ಹಾರಗಳಿಂದ ವಿಶೇಷವಾಗಿ ಅಲಂಕಾರಗೊಳಿಸಿಲಾಯಿತು.ಸಂಜೆ ನಗರದ ಮುಖ್ಯರಸ್ತೆಯಲ್ಲಿ ವಿಶೇಷ ಅಲಂಕೃತವಾದ ವಾಸವಿ ಜಗನ್ಮಾತೆಯನ್ನು ಕುಳ್ಳಿರಿಸಿ ಮೆರವಣಿಗೆ ಮಾಡಲಾಯಿತು. ಶ್ರೀ ವಾಸವಿ ಸಮಾಜ, ಶ್ರೀ ವಾಸವಿ ಯುವಜನ ಸಂಘ ಹಾಗೂ ಶ್ರೀ ವಾಸವಿ ಮಹಿಳಾ ಸಂಘ, ಸಂಘದ ಎಲ್ಲಾ ಕಾರ್ಯಕರ್ತರು ಮೆರವಣಿಗೆಯುದ್ದಕ್ಕೂ ಸಾಗಿ ದೇವಿಯ ನಾಮಸ್ಮರಣೆ ಮಾಡಿದರು. ಈ ಬಾರಿ ಹೆಚ್ಚಾಗಿ ಮಳೆ ಬರಲಿ, ನಾಡಿನ ರೈತರಿಗೆ ನೆಮ್ಮದಿ ನೀಡಲಿ ಎಂದು ವಾಸವಿ ಯುವಜನ ಸಂಘದ ಅಧ್ಯಕ್ಷ ಸದ್ಗುರು ಪ್ರದೀಪ್ ತಾಯಿ ವಾಸವಿ ದೇವಿಗೆ ವಿಶೇಷ ಪೂಜೆ ನೆರವೇರಿಸಿದರು.

ಫಾಸ್ಟ್ ನ್ಯೂಸ್

ಡಿಪ್ಲೊಮಾ ಪ್ರವೇಶಾತಿ: ವಿಶೇಷಚೇತನರಿಂದ ಅರ್ಜಿ

» ಚಿತ್ರದುರ್ಗ

ಮೈಸೂರು ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ವತಿಯಿಂದ 2023–24ನೇ ಸಾಲಿಗೆ ಮೂರು ವರ್ಷಗಳ ಅವಧಿಯ ಡಿಪ್ಲೊಮಾ ಕೋರ್ಸುಗಳ ಪ್ರವೇಶಕ್ಕೆ ವಿಶೇಷಚೇತನ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಜೂನ್ 15 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅನುದಾನಿತ ಕೋರ್ಸುಗಳಾದ ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟರ ಸೈನ್ಸ್ ಮತ್ತು ಇಂಜಿನಿಯರಿಂಗ್ ಹಾಗೂ ಅನುದಾನ ರಹಿತ ಕೋರ್ಸುಗಳಾದ ಜ್ಯುಯಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್, ಅಪಾರೇಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ ಕೋರ್ಸುಗಳಿಗೆ ವಿಶೇಷಚೇತನರು ಅರ್ಜಿ ಸಲ್ಲಿಸಬಹುದು.

ಪ್ರವೇಶಾರ್ಹತೆ: ಕರ್ನಾಟಕ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನಿಷ್ಠ ಶೇ.35 ಅಂಕಗಳೊಂದಿಗೆ ತೇರ್ಗಡೆ ಹಾಗೂ ಮೂಳೆ ಮತ್ತು ಕೀಲು ಅಂಗವಿಕಲತೆ ಶೇ.40 ಮತ್ತು ಮೇಲ್ಪಟ್ಟು, ಕಿವುಡು ಮತ್ತು ಮೂಗು ಅಂಗವಿಕಲತೆ 60 ಡಿಬಿ ಮತ್ತು ಮೇಲ್ಪಟ್ಟು, ಭಾಗಶಃ ಮತ್ತು ಪೂರ್ಣ ಅಂಧತ್ವ 6/60 ಅಥವಾ 20/200 ಸ್ನೆಲೆನ್ ಹೊಂದಿರುವವರು ಅರ್ಜಿ ಸಲ್ಲಿಸಬಹುದು. ಅರ್ಹ ವಿದ್ಯಾರ್ಥಿಗಳಿಗೆ ರಾಜ್ಯ ಮತ್ತು ರಾಷ್ಟ್ರಮಟ್ಟದ ವಿದ್ಯಾರ್ಥಿವೇತನದ ಆರ್ಥಿಕ ಸಹಾಯ ದೊರೆಯುತ್ತದೆ. ಪಾಲಿಟೆಕ್ನಿಕ್‌ನ ಯಶಸ್ವಿ ವಿದ್ಯಾರ್ಥಿಗಳಿಗೆ ಉದ್ಯೋಗ ಮತ್ತು ತರಬೇತಿ ಕೇಂದ್ರದ ಮೂಲಕ ಉದ್ಯೋಗಾವಕಾಶವನ್ನು ಕಲ್ಪಿಸಿಕೊಡಲಾಗುತ್ತದೆ. ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರುಗಳಿಗೆ ಪ್ರತ್ಯೇಕ ವಿದ್ಯಾರ್ಥಿನಿಲಯದ ಸೌಲಭ್ಯ ಕಲ್ಪಿಸಲಾಗಿದೆ. ಪ್ರವೇಶಕ್ಕೆ ಅರ್ಜಿಗಳನ್ನು ಸಮಾನ್ಯ ವರ್ಗದ ಅಭ್ಯರ್ಥಿಗಳು ರೂ100/ ಹಾಗೂ ಖಅ/ಖಖಿ/ಅ–1 ವರ್ಗದವರಿಗೆ ರೂ 50/ ನಗದು ಅಥಾವಾ ಡಿಡಿ ಮೂಲಕ ಮೈಸೂರಿನಲ್ಲಿ ಸಂದಾಯವಾಗುವಂತೆ ಕಳುಹಿಸಿ ಅರ್ಜಿ ಪಡೆಯಯಬಹುದು ಅಥಾವಾ ವೆಬ್ ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್ www.jsspda.org / ದೂರವಾಣಿ ಸಂಖ್ಯೆ 9844644937 ಗೆ ಸಂಪರ್ಕಿಸಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಜೂನ್ 15 ರೊಳಗೆ ಕಚೇರಿಗೆ ತಲುಪಿಸಬೇಕೆಂದು ತಿಳಿಸಿದ್ದಾರೆ.

ಮಾಜಿ ಸೈನಿಕರ ವಿಳಾಸ ನಿವಾಸಿ ದೃಢೀಕರಣ ನೀಡುವ ಕುರಿತು

» ಚಿತ್ರದುರ್ಗ

ಮಾಜಿ ಸೈನಿಕರು ಹಾಗೂ ಮಾಜಿ ಸೈನಿಕರ ಅವಲಂಬಿತರು ತಮ್ಮ ಮನೆಯ ವಿಳಾಸ ಬದಲಾವಣೆಗಾಗಿ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಯನ್ನು ಸಂಪರ್ಕಿಸುವ ಮೊದಲು ತಮ್ಮ ಪ್ರಸ್ತುತ ವಾಸವಿರುವ ಸ್ಥಳದ ಸ್ಥಳೀಯ ಗ್ರಾಮ ಪಂಚಾಯಿತಿ, ನಗರಸಭೆ ಅಥವಾ ಯಾವುದೇ ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿದ ನಿವಾಸಿ ಪ್ರಮಾಣ ಪತ್ರದ ಮೂಲ ಪ್ರತಿ ಹಾಗೂ ಮಾಜಿ ಸೈನಿಕರ ಮೂಲ ದಾಖಲೆಗಳೊಂದಿಗೆ ಭೇಟಿ ನೀಡಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಕಚೇರಿಯ ದೂರವಾಣಿ ಸಂಖ್ಯೆ 08182–220925 ಅನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಡಾ॥ ಎ.ಪಿ.ಜೆ.ಅಬ್ದುಲ್ ಕಲಾಂ, ಮೊರಾರ್ಜಿ ಕಾಲೇಜುಗಳಿಗೆ ಪಿ.ಯು.ಸಿ ಪ್ರವೇಶಕ್ಕಾಗಿ ಅರ್ಜಿ

» ದಾವಣಗೆರೆ

ದಾವಣಗೆರೆ ಜಿಲ್ಲೆಯಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2024–25 ನೇ ಸಾಲಿಗೆ ಡಾ॥ ಎ.ಪಿ.ಜೆ.ಅಬ್ದುಲ್ ಕಲಾಂ ಪದವಿ ಪೂರ್ವ ವಸತಿ ಕಾಲೇಜು, ಕೊಂಡಜ್ಜಿ ಗ್ರಾಮದಲ್ಲಿನ ಮೊರಾರ್ಜಿ ದೇಸಾಯಿ ಬಾಲಕಿಯರ ವಸತಿ ಕಾಲೇಜು, ದಾವಣಗೆರೆ, ಮೊರಾರ್ಜಿದೇಸಾಯಿ ವಸತಿ ಕಾಲೇಜು, ಕೆರೆಬಿಳಚಿ, ಇಲ್ಲಿ ಪ್ರಥಮ ವಿಷಯಗಳಲ್ಲಿ ವ್ಯಾಸಂಗ ಮಾಡಲು ಪ್ರತಿಭಾನ್ವಿತ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

ಫಾಸ್ಟ್ ನ್ಯೂಸ್

ಮನುಷ್ಯನಲ್ಲಿ ರಕ್ತದೊತ್ತಡ, ಸಕ್ಕರೆ ಕಾಯಿಲೆ ಸರ್ವೆ ಸಾಮಾನ್ಯ

» ಮೊದಲ ಪುಟದಿಂದ

ರೋಟರಿ ಕ್ಲಬ್ ಕಾರ್ಯದರ್ಶಿ ರೊ.ವಿಕ್ರಾಂತ್‌ಜೈನ್, ಡಾ.ರವಿ ಹೆಚ್.ರಂಗಾರೆಡ್ಡಿ ವೇದಿಕೆಯಲ್ಲಿದ್ದರು. ರೊ.ಸೂರ್ಯನಾರಾಯಣ, ರೊ.ಡಾ.ತಿಪ್ಪೇಸ್ವಾಮಿ, ನಿಯೋಜಿತ ಅಧ್ಯಕ್ಷ ಜಿ.ಎನ್.ವೀರಣ್ಣ, ಸೀನಿಯರ್ ಮಾರ್ಕೆಟಿಂಗ್ ಮ್ಯಾನೇಜರ್ ಪರಶುರಾಂ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿದ್ದರು. ಎಸ್.ಎ.ಎಸ್.ಮೆಡ್ ಫಾರ್ಮದ ಮಂಜುನಾಥ ಉಚಿತವಾಗಿ ಔಷಧಿಗಳನ್ನು ವಿತರಿಸಿದರು. 75 ಮಂದಿಯ ತಪಾಸಣೆ ನಡೆಸಿ ಐದು ಮಂದಿಯ ಮಂಡಿ ಮರುಜೋಡಣೆ, ಆರು ಜನಕ್ಕೆ ಎಕ್ಸರೆ, ನಾಲ್ಕು ಮಂದಿಗೆ ಎಂ.ಆರ್.ಐ. ಸ್ಕ್ಯಾನಿಂಗ್‌ಗೆ ಶಿಫಾರಸ್ಸು ಮಾಡಲಾಯಿತು. ರಕ್ತದೊತ್ತಡ, ಸಕ್ಕರೆ ಕಾಯಿಲೆ, ಸಾಮಾನ್ಯ ಪರೀಕ್ಷೆ, ಕೀಲು ಮತ್ತು ಮೂಳೆ, ಸ್ತ್ರೀರೋಗ ತಪಾಸಣೆ ನಡೆಯಿತು.

ಸೋಬಾನೆ ಪದದ ಕೋಗಿಲೆ ಈಶ್ವರಪ್ಪ ಇನ್ನು ನೆನಪು ಮಾತ್ರ

» ಹೊಸದುರ್ಗ

ತಾಲೂಕಿನ ಆನಿವಾಳ ಗ್ರಾಮದ ಹಿರಿಯ ಜಾನಪದ ಕಲಾವಿದ ಎಂ.ಈಶ್ವರಪ್ಪ (ಸೋಬಾನೆ ಈಶ್ವರಣ್ಣ) ನವರು (80) ಇಂದು ಮಧ್ಯಾಹ್ನ 01–00 ನಿಧನರಾಗಿದ್ದು, ಮೃತ ಈಶ್ವರಪ್ಪನವರು ಸಾವಿರಾರು ಸೋಬಾನೆ ಗೀತೆಗಳನ್ನು ಜಾನಪದ ಶೈಲಿಯಲ್ಲಿ ನಿರಗ್ಗಳವಾಗಿ ಹಾಡುತ್ತಿದ್ದರು.ಮೃತರ ಅಂತ್ಯಕ್ರಿಯೆ ದಿನಾಂಕ 20 –05–2024 ರಂದು ಬೆಳಿಗ್ಗೆ 11–00 ಗಂಟೆಗೆ ನಡೆಸಲಾಗುವದೆಂದು ಅವರ ಕುಟುಂಬಸ್ಥರು ತಿಳಿಸಿದ್ದಾರೆ ದಿವಂಗತರಿಗೆ ಒರ್ವ ಸಹೋದರ & ಇಬ್ಬರು ಸಹೋದರಿಯರಿದ್ದಾರೆ.

ಇಂದು ಮಡಿವಾಳ ಸಮಾಜದಿಂದ ಪ್ರತಿಭಟನೆ

» ದಾವಣಗೆರೆ

ಶ್ರೀ ಮಡಿವಾಳ ಮಾಚಿದೇವ ಸಂಘ ವಿನೋಭಾ ನಗರ, 17ನೇ ಕ್ರಾಸ್, ದಾವಣಗೆರೆ ದಾವಣಗೆರೆ ಜಿಲ್ಲಾ ಸಮಿತಿಯಿಂದ ಹುಬ್ಬಳ್ಳಿ ನಗರದ ನೇಹಾ ಹಿರೇಮರ್ ಮತ್ತು ಅಂಜಲಿ ಅಂಬಿಗರ ಇವರನ್ನು ಹತ್ತೆಗೈದ ಆರೋಪಿಗಳನ್ನು ಹಾಗೂ ಕಲಬುರ್ಗಿ ಜಿಲ್ಲಾ, ಸೇಡಂ ತಾಲ್ಲೂಕಿನ ದೇವನೂರು ಗ್ರಾಮದ ಅರ್ಜುನಪ್ಪ ಹಣಮಂತನ ಮೇಲೆ ಹಲ್ಲೆ ಮಾಡಿರುವ ಹಲ್ಲೇಕೋರರನ್ನು ಗಲ್ಲು ಶಿಕ್ಷೆಗೆ ಗುರಿ ಪಡಿಸಲು ಒತ್ತಾಯಿಸಿ ಬೃಹತ್ ಪ್ರತಿಭಟನಾ ಮೆರವಣಿಗೆಯನ್ನು ಮೇ 20ರಂದು ಸೋಮವಾರ ಬೆಳಿಗ್ಗೆ 11ಕ್ಕೆ ನಗರದ ಜಯದೇವ

ವೃತ್ತದಿಂದ ದಾವಣಗೆರೆ ಉಪ ವಿಭಾಗಾಧಿಕಾರಿ ಕಚೇರಿವರೆಗೆ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು, ಮಡಿವಾಳ ಸಮುದಾಯದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ವೆರವಣಿಗೆಯಲ್ಲಿ ಪಾಲ್ಗೊಳ್ಳಲು ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಂಘದ ಅಧ್ಯಕ್ಷ ಎಂ. ನಾಗೇಂದ್ರಪ್ಪ, ಕಾರ್ಯಾಧ್ಯಕ್ಷ ಹೆಚ್.ಜಿ.ಉಮೇಶ್ ಸೇರಿದಂತೆ ಪದಾಧಿಕಾರಿಗಳು ಕೋರಿದ್ದಾರೆ.

ರಾಮಜೋಗಿಹಳ್ಳಿ : ಮನೆಯ ಮೇಲ್ಛಾಗ ಕುಸಿದು ಬಿದ್ದು 40 ಸಾವಿರ ನಷ್ಟ.



» ಚಳ್ಳಕೆರೆ

ತಾಲ್ಲೂಕಿನ ರಾಮಜೋಗಿಹಳ್ಳಿ ಗ್ರಾಮದಲ್ಲಿ ಶನಿವಾರ ರಾತ್ರಿ ಸುರಿದ ಮಳೆಗೆ ಗ್ರಾಮದ ಕಮಲಮ್ಮ ಎಂಬುವವರಿಗೆ ಸೇರಿದ ವಾಸದ ಮನೆಯ ಮೇಲ್ಛಾಗ ಸಂಪೂರ್ಣವಾಗಿ ಕಳಚಿಬಿದಿದ್ದು, ಅದೃಶವಶಾತ್ ಯಾರಿಗೂ ಯಾವುದೇ ಪ್ರಾಣಾಪಾಯವಾಗಿಲ್ಲ, ಮಳೆಗೆ ಮೇಲ್ಛಾವಣಿ ಸೋರಲು ಆರಂಭಿಸಿದಾಗ ಜಾಗೃತಗೊಂಡ ಮನೆಯವರು ಸಾಮಾನು,ಸರಂಜಾಮು, ಅವರೂ ಸಹ ಮನೆಯಿಂದ ಹೊರಗೆ ಬಂದ ಕೆಲವೇ ಹೊತ್ತಿನಲ್ಲಿ ಮೇಲ್ಛಾಗ ಕುಸಿದು ಬಿದಿದ್ದೆ. ಸುಮಾರು 40 ಸಾವಿರಕ್ಕೂ ಹೆಚ್ಚು ನಷ್ಟ ಸಂಭವಿಸಿದೆ ಎನ್ನಲಾಗಿದೆ. ಸುದ್ದಿ ತಿಳಿದ ಕೂಡಲೇ ನೆರೆಹೊರೆಯವರು ದಾವಿಸಿಬಂದು ಇವರನ್ನು ಸುರಕ್ಷಿತವಾಗಿ ಬೇರೆಡೆ ಕರೆದ್ಯೊಯ್ದಿದ್ದಾರೆ. ದಿಢೀರನೇ ಮೇಲ್ಛಾಗ ಕುಸಿದ ಹಿನ್ನೆಲೆಯಲ್ಲಿ ಆತಂಕ ಉಂಟಾಗಿತ್ತು. ಕಳೆದ 2022ರ ಮೇ ಮಾಹೆಯಲ್ಲೂ ಸಹ ಗ್ರಾಮದ ಮನೆಯೊಂದರ ಗೋಡೆ ಕುಸಿದು ಬಿದ್ದು ಇಬ್ಬರು ಮಕ್ಕಳು ಹಾಗೂ ತಾಯಿ ಮೃತಪಟ್ಟ ಘಟನೆ ನಡೆದಿದ್ದು, ಆ ನೆನಪು ಇನ್ನೂ ಈ ಭಾಗದ ಜನರನ್ನು ಎಡಬಿಡದೆ ಕಾಡುತ್ತಿದೆ.

ದಾಖಲೆ ಇಲ್ಲದೆ ಚರಿತ್ರೆ ಬರೆಯುವುದು ಕಷ್ಟ

» ಚಿತ್ರದುರ್ಗ

ಚರಿತ್ರೆಗೆ ದಾಖಲೆ ಮುಖ್ಯ. ದಾಖಲೆ ಇಲ್ಲದೆ ಚರಿತ್ರೆ ಬರೆಯುವುದು ಕಷ್ಟ ಎಂದು ಸರ್ಕಾರಿ ಕಲಾ ಕಾಲೇಜು ಇತಿಹಾಸ ವಿಭಾಗದ ಸಹಾಯಕ ಪ್ರಾಧ್ಯಾಪಕ ಎಸ್. ರೇವಣಸಿದ್ದಪ್ಪ ಹೇಳಿದರು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಸರ್ಕಾರಿ ವಸ್ತು ಸಂಗ್ರಹಾಲಯ ಚಿತ್ರದುರ್ಗ, ಸರ್ಕಾರಿ ಕಲಾ ಕಾಲೇಜು ಸ್ವಾಯತ್ತ ಇದರ ಸಹಯೋಗದೊಂದಿಗೆ ರಂಗಯ್ಯನಬಾಗಿಲು ಸಮೀಪವಿರುವ ಸರ್ಕಾರಿವಸ್ತುಸಂಗ್ರಹಾಲಯದಲ್ಲಿಶನಿವಾರ ಏರ್ಪಡಿಸಲಾಗಿದ್ದ ಅಂತರಾಷ್ಟ್ರೀಯ ವಸ್ತು ಸಂಗ್ರಹಾಲಯ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು.

ಪಿ.ಹೆಚ್.ಡಿ. ಮಾಡುವಾಗ ಸಂಗ್ರಹಾಲಯಗಳು ಸಹಾಯವಾಗುತ್ತವೆ. ಶಾಸನ, ತಾಳೆಗರಿ, ಕೈಬರಹ, ಕಡತಗಳು ಸಿಗುತ್ತವೆ. ಪುರಾತತ್ವ ಇಲಾಖೆ ಚರಿತ್ರೆಗಾರರಿಗೆ ತವರು ಮನೆ ಇದ್ದಂತೆ. ಇತಿಹಾಸ ಬರೆಯುವ ಪ್ರಯತ್ನ ಮಾಡಿಲ್ಲ. ಯೂರೋಪಿಯನ್ನರು ಬರೆದಿರುವ ಚರಿತ್ರೆಯನ್ನೇ ಇದುವರೆವಿಗೂ ಓದುತ್ತಿದ್ದೇವೆ. ಜಿಲ್ಲೆಯಲ್ಲಿ ಐತಿಹಾಸಿಕ ನೆಲೆಗಳಿವೆ. ಅಧ್ಯಯನದಲ್ಲಿ ತೊಡಗಿಕೊಳ್ಳಿ ಎಂದು ಇತಿಹಾಸ ವಿಭಾಗದ ವಿದ್ಯಾರ್ಥಿಗಳಿಗೆ ತಿಳಿಸಿದರು.

ಎಲ್ಲಾ ಯುಗಗಳಿಗೂ ಸಂಬಂಧಪಟ್ಟ ದಾಖಲೆಗಳಿವೆ. ಮಾನವನ ಮೊಟ್ಟ ಮೊದಲ ಕುರುಹು ಪತ್ತೆಯಾಗಿದ್ದು, ದಕ್ಷಿಣ ಭಾರತದಲ್ಲಿಕದಂಬರು,ಮಯೂರವರ್ಮ, ಭಟ್ಟರು ಇಲ್ಲಿಗೆ ಬಂದರು. ತಾಳೆಗರಿ, ಶಾಸನ, ವೀರಗಲ್ಲು, ಮಾಸ್ತಿಗಲ್ಲುಗಳುಗಳಿವೆ. ಇತಿಹಾಸದ ಬಗ್ಗೆ ಆಸಕ್ತಿ ಮೂಡಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ನಿವೃತ್ತ ಪ್ರಾಂಶುಪಾಲರಾದ ಕೆ.ಎಸ್. ರಾಜಪ್ಪ ಮಾತನಾಡಿ ಮ್ಯೂಸಿಯಂನಲ್ಲಿ ಸಾಕಷ್ಟು ವಿಚಾರಗಳು ಸಿಗುತ್ತವೆ. ಸಣ್ಣ ಸಣ್ಣ ವಿಷಯಗಳನ್ನಿಟ್ಟುಕೊಂಡು ಸಂಶೋಧನೆ ಮಾಡಲು ಅವಕಾಶಗಳಿದೆ. ಮೊಬೈಲ್ ಗೀಳಿನಲ್ಲಿ ಯುವ ಜನಾಂಗ ಹಾಳಾಗುತ್ತಿದೆ. ಸಂಗ್ರಹಾಲಯಗಳನ್ನು ತಿರುಗಿ ಹೆಚ್ಚಿನ ಜ್ಞಾನ ವೃದ್ಧಿಸಿಕೊಳ್ಳಿ ಎಂದು ಇತಿಹಾಸ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮದಕರಿನಾಯಕ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷ ಡಿ.ಗೋಪಾಲಸ್ವಾಮಿನಾಯಕ ಮಾತನಾಡುತ್ತ ವಸ್ತು ಸಂಗ್ರಹಾಲಯಗಳಲ್ಲಿ ಪೂರ್ವಜರ ಜೀವನ, ಪರಂಪರೆ, ಸ್ಮಾರಕಗಳು ಸಿಗುತ್ತವೆ. ದೆಹಲಿಯಲ್ಲಿ ಐದು ಸಾವಿರ ವರ್ಷಗಳ ಇತಿಹಾಸವಿರುವ ಮ್ಯೂಸಿಯಂ ಇದೆ. ಇತಿಹಾಸ, ಪರಂಪರೆ, ಸಂಸ್ಕೃತಿಯನ್ನು ಸಂಗ್ರಹಾಲಯಗಳು ತಿಳಿಸುತ್ತವೆ. ಚಿತ್ರದುರ್ಗ ಸಾಂಸ್ಕೃತಿಕ, ಜಾನಪದಕ್ಕೆ ತವರು ಮನೆಯಿದ್ದಂತೆ. ವಿಶ್ವಸಂಸ್ಥೆಯಲ್ಲಿಯೂ ಅತ್ಯುತ್ತಮವಾದ ಸಂಗ್ರಹಾಲಯವಿದೆ. ಇತಿಹಾಸ ವಿದ್ಯಾರ್ಥಿಗಳು ಅವುಗಳನ್ನೆಲ್ಲಾ ನೋಡಿ ಕಲಿಯುವುದು ಬಹಳಷ್ಟಿದೆ ಎಂದರು.

ಪುರಾತತ್ವ ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆಯ ಸಹಾಯಕ ನಿರ್ದೇಶಕರಾದ ಜಿ.ಪ್ರಹ್ಲಾದ್ ಮಾತನಾಡಿ ಸಂಗ್ರಹಾಲಯಗಳಿಂದ ಹಲವಾರು ವಿಚಾರಗಳನ್ನು ತಿಳಿದುಕೊಳ್ಳಬಹುದು. ರಾಜ ವಂಶಸ್ಥರು, ಸಂಸ್ಕೃತಿ, ಪರಂಪರೆ, ಇತಿಹಾಸಕ್ಕೆ ಸಂಬಂಧಪಟ್ಟ ಪ್ರಾಚೀನ ಕುರುಹುಗಳು, ಸಿಗುತ್ತವೆ. ನಮ್ಮ ಜಿಲ್ಲೆಯಲ್ಲಿ ನಾಲ್ಕು ಮ್ಯೂಸಿಯಂಗಳಿವೆ. ಎಲ್ಲವನ್ನು ಇತಿಹಾಸ ವಿಭಾಗದ ವಿದ್ಯಾರ್ಥಿಗಳು ನೋಡಬೇಕೆಂದು ತಿಳಿಸಿದರು.

ಯುವ ಜನತೆಗೆ ಏಡ್ಸ್ ಅರಿವು ಅತ್ಯಗತ್ಯ

» ಪರಶುರಾಂಪುರ

ಅಸುರಕ್ಷಿತ ಲೈಂಗಿಕ ಸಂಪರ್ಕದಿಂದಾಗಿ ಯುವ ಜನತೆ ದಾರಿ ತಪ್ಪುತ್ತಿರುವ ಈ ಸಂದರ್ಭದಲ್ಲಿ ಏಡ್ಸ್ ರೋಗದ ಬಗ್ಗೆ ಅರಿವು ಉಂಟು ಮಾಡುವುದು ಅತ್ಯವಶ್ಯವಾಗಿದೆ ಎಂದು ಡಾ.ವಿನಯ್ ಹೆಚ್. ಎಂ. ಅಭಿಪ್ರಾಯಪಟ್ಟರು.

ಗ್ರಾಮದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ, ಚಿತ್ರದುರ್ಗ,ಐಸಿಟಿಸಿ ಕೇಂದ್ರ,ಸಮುದಾಯ ಆರೋಗ್ಯ ಕೇಂದ್ರ,ಕಾಲೇಜಿನ ರೆಡ್ ರಿಬ್ಬನ್ ಕ್ಲಬ್ ವತಿಯಿಂದ ಆಯೋಜಿಸಲಾಗಿದ್ದ ಏಡ್ಸ್ ರೋಗ ಮತ್ತು ಸ್ವಯಂಪ್ರೇರಿತ ರಕ್ತದಾನ ಕುರಿತ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಏಡ್ಸ್ ರೋಗ ತಡೆಗಟ್ಟುವಲ್ಲಿ ಯುವ ಜನತೆಯ ಪಾತ್ರ ನಿರ್ಣಾಯಕವಾಗಿದ್ದು,ಯಾವುದೇ ಮುಜುಗರವಿಲ್ಲದೆ ಈ ರೋಗದ ಮಾಹಿತಿಯನ್ನು ತಿಳಿದುಕೊಳ್ಳಬೇಕೆಂದು ಕರೆ ನೀಡಿದರು.

ಐಸಿಟಿಸಿ ಆಪ್ತ ಸಮಾಲೋಚಕ ಚನ್ನಪ್ಪ ಹೆಚ್. ಮಾತನಾಡಿ,ಏಡ್ಸ್ ರೋಗದ ಇತಿಹಾಸ, ಗುಣಲಕ್ಷಣಗಳು,ಹರಡುವ ವಿಧಾನಗಳು, ಪರೀಕ್ಷೆ ಕ್ರಮಗಳು,ಚಿಕಿತ್ಸೆ,ರಕ್ತದಾನದ ಮಹತ್ವ ಮೊದಲಾದ ವಿಚಾರಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲ ಧನಂಜಯ ಎಂ.ಬಿ.ಇವರು ಮಾತನಾಡಿ,ವಿದ್ಯಾರ್ಥಿಗಳಿಗೆ ಈ ರೀತಿಯ ಜಾಗೃತಿ ಚಟುವಟಿಕೆಗಳು ಪಠ್ಯದಷ್ಟೇ ಪ್ರಮುಖವಾಗಿದ್ದು, ಸಾಮಾಜಿಕ ಸ್ವಾಸ್ಥವನ್ನು ಕಾಪಾಡಿಕೊಳ್ಳಲು ನೆರವಾಗುತ್ತವೆ ಎಂದು ತಿಳಿಸಿದರು.ಇದೇ ಸಂದರ್ಭದಲ್ಲಿ ಪ್ರಬಂಧ ಮತ್ತು ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿದ್ದ ಸರ್ವರನ್ನು ಉಪನ್ಯಾಸಕ ವೈ ಲಿಂಗೇಶ್ವರ ಸ್ವಾಗತಿಸಿದರೆ, ಎನ್ ಎಸ್ ಎಸ್ ಅಧಿಕಾರಿಗಳಾದ ಡಾ.ತಿಪ್ಪೇರುದ್ರ ಸಂಡೂರು ಪ್ರಾಸ್ತವಿಕ ಮಾತುಗಳನ್ನು ಹೇಳಿದರು.ಕಾರ್ಯಕ್ರಮದ ನಿರೂಪಣೆಯನ್ನು ಕು.ರಂಜಿತ ಇವರು ನೆರವೇರಿಸಿದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಹಲಸಂದಿ ಸತೀಶ್,ಮೊಹಮ್ಮದ್ ಸಾಧತ್, ಭರತ್ ಬಿ ಟಿ,ಡಾ. ಶರತ್ ಬಾಬು,ನರಸಿಂಹಮೂರ್ತಿ ಸೇರಿದಂತೆ ಉಪನ್ಯಾಸಕ ವೃಂದ ಉಪಸ್ಥಿತರಿದ್ದರು.

ಪರಶುರಾಂಪುರ: ವಾಸವಿ ಜಯಂತಿ ಆಚರಣೆ

» ಪರಶುರಾಂಪುರ

ಗ್ರಾಮದ ಆರ್ಯ ವೈಶ್ಯ ಸಮಾಜದವರಿಂದ ವಾಸವಿ ಜಯಂತಿಯನ್ನು ಶನಿವಾರ ಆಚರಿಸಲಾಯಿತು.

ಕೋರ್ಲಕುಂಟೆ ರಸ್ತೆಯಲ್ಲಿ ಬರುವ ರಾಮಾಂಜನೇಯ ದೇವಸ್ಥಾನದ ಆವರಣದಲ್ಲಿ ಜಯಂತಿ ನಿಮಿತ್ತ ಬೆಳಗ್ಗೆಯಿಂದ ಗಂಗಾಸ್ಥಳ ಪೂಜೆ, ಪಂಚಾಮೃತ ಅಭಿಷೇಕ, ಅರ್ಚನೆ, ವಾಸವಿ ಅಷ್ಟೋದಕ, ಮಹಾಮಂಗಳಾರತಿ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನ ನೆರವೇರಿಸಿ ದೇವಸ್ಥಾನದಿಂದ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ವಾಸವಿ ಭಾವಚಿತ್ರ ಜತೆ ಕುಂಭ, ಕಳಸಗಳನ್ನು ಮೆರವಣಿಗೆ ಮಾಡಲಾಯಿತು.

ಕಿರಣ್‌ಕುಮಾರ್,ಸಂದೀಪ್,ನರೇಶ್,ಮಹೇಶ್ ಕುಮಾರ್, ಸಿ ಎಚ್ ನಾಗರಾಜ್, ವೆಂಕಟಾಚಲ, ಎಸ್ ರಾಜು, ಎಂ ಎಸ್ ರಾಜು, ಈಶ್ವರ್ ಶೆಟ್ಟಿ, ಶಕುಂತಲಮ್ಮ ನಾಗರತ್ನಮ್ಮ,ಲಕ್ಷ್ಮಿ,ತನುಜ,ಸಹನಾ,ಜ್ಯೋತಿ,ರೂಪ, ಸತೀಶ್,ಹೇಮಾ,ನವೀನ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಯುವ ಜನತೆಗೆ ಏಡ್ಸ್ ರೋಗದ ಅರಿವು ಅತ್ಯಗತ್ಯ : ಡಾ.ವಿನಯ್ ಹೆಚ್. ಎಂ.

ಪರಶುರಾಪುರ–ಅಸುರಕ್ಷಿತ ಲೈಂಗಿಕ ಸಂಪರ್ಕದಿಂದಾಗಿ ಯುವ ಜನತೆ ದಾರಿ ತಪ್ಪುತ್ತಿರುವ ಈ ಸಂದರ್ಭದಲ್ಲಿ ಏಡ್ಸ್ ರೋಗದ ಬಗ್ಗೆ ಅರಿವು ಉಂಟು ಮಾಡುವುದು ಅತ್ಯವಶ್ಯವಾಗಿದೆ ಎಂದು ಡಾ.ವಿನಯ್ ಹೆಚ್. ಎಂ. ಅಭಿಪ್ರಾಯಪಟ್ಟರು.

ಗ್ರಾಮ ದೇವತೆ ಶ್ರೀವೀರಭದ್ರಸ್ವಾಮಿಗೆ ಕಂಕಣಧಾರಣೆಯೊಂದಿಗೆ ಜಾತ್ರಾ ಮಹೋತ್ಸವಕ್ಕೆ ಚಾಲನೆ

» ಚಳ್ಳಕೆರೆ

ಕಳೆದ ನೂರಾರು ವರ್ಷಗಳಿಂದ ನಗರದ ಜನತೆಯ ಯೋಗಕ್ಷೇಮವನ್ನು ಬಯಸಿ ಗ್ರಾಮ ದೇವರಾದ ಶ್ರೀವೀರಭದ್ರಸ್ವಾಮಿಯ ಭವ್ಯ ರಥೋತ್ಸವವನ್ನು ಪ್ರತಿವರ್ಷ ನಡೆಸುತ್ತಾ ಬಂದಿದ್ದು, ಪ್ರಸ್ತುತ 2024ರ ರಥೋತ್ಸವಕ್ಕೆ ಶ್ರೀಸ್ವಾಮಿಯ ಕಂಕಣಧಾರಣೆ ಮಾಡುವ ಮೂಲಕ ಜಾತ್ರಾ ಮಹೋತ್ಸವಕ್ಕೆ ಚಾಲನೆ ನೀಡಲಾಯಿತು. ಶ್ರೀವೀರಭದ್ರಸ್ವಾಮಿ ದೇವಸ್ಥಾನದ ಧರ್ಮದರ್ಶಿಗಳಾದ ಗೌಡ್ರರಾಮಣ್ಣ, ಗ್ರಾಮದ ಶಾನಭೋಗರಾದ ಪಿ.ವಿ.ಸುಬ್ಬಣ್ಣ, ಕುಮಾರಸ್ವಾಮಿ ದೇವಸ್ಥಾನದ ಆಯಗಾರರಾದ ಗೌಡ್ರನಾಗಣ್ಣ, ಗೌಡ್ರಚಿಕ್ಕಣ್ಣ, ಪಿ.ತಿಪ್ಪೇಸ್ವಾಮಿ, ದಳವಾಯಿಮೂರ್ತಿ, ಸೂರಯ್ಯ, ಮಂಜು, ಟೈಲರ್‌ವೀರೇಶ್, ದೇವಿಪ್ರಸಾದ್, ನಾಗರಾಜು, ಪೂಜಾರಾದ ಶಾಂತಕುಮಾರ್, ಸುರೇಶ್‌ಕುಮಾರ್, ಕುಮಾರಸ್ವಾಮಿ ಹಾಗೂ ಭಕ್ತರು ಕಂಕಣಧಾರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಜಾತ್ರೋತ್ಸವದ ಬಗ್ಗೆ ಮಾಹಿತಿ ನೀಡಿದ ಧರ್ಮದರ್ಶಿ ಗೌಡ್ರರಾಮಣ್ಣ, ಮೇ.19ರ ಭಾನುವಾರ, ಮೇ.20ರ ಸೋಮವಾರ ಶ್ರೀವೀರಭದ್ರಸ್ವಾಮಿ ವಿಶೇಷ ಪೂಜೆ, ಅಲಂಕಾರಗಳನ್ನು ನೆರವೇರಿಸಲಾಗುವುದು. ಮೇ.21ರ ಮಂಗಳವಾರ ಬೆಳಗಿನ ಜಾವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಪುರಂತರ ವೀರನಾಟ್ಯದೊಂದಿಗೆ ಅಗ್ನಿಕುಂಡ ಕಾರ್ಯಕ್ರಮವಿರುತ್ತದೆ. ಮೇ. 22ರ ಬುಧವಾರ ಶ್ರೀವೀರಭದ್ರಸ್ವಾಮಿ ದೊಡ್ಡರಥೋತ್ಸವ ಜರುಗಲಿದೆ, ಅಂದು ಶ್ರೀಸ್ವಾಮಿಯನ್ನು ಪಲ್ಲಕ್ಕಿಯಲ್ಲಿ ಹೊತ್ತು ದೇವಸ್ಥಾನದ ಆವರಣದಲ್ಲಿ ಮಂಗಳವಾದ್ಯಗಳೊಂದಿಗೆ ಪ್ರದಕ್ಷಣೆ ಹಾಕಿ ದೊಡ್ಡ ರಥೋತ್ಸವದಲ್ಲಿ ಸ್ವಾಮೀಯ ಮೂರ್ತಿ ಪ್ರತಿಷ್ಠಾಪಿಸಲಾಗುವುದು. ನಂತರ ಮುಕ್ತಿ ಬಾವುಟವನ್ನು ಹರಾಜು ಮಾಡಲಾಗುವುದು. ಮೇ. 23ರ ಗುರುವಾರ ಕಡುಬಿನ ಕಾಳಗ ನಡೆಯಲಿದ್ದು, ಮೇ. 24 ಶುಕ್ರವಾರ ಕಂಕಣವಿಸರ್ಜನೆಯೊಂದಿಗೆ ಜಾತ್ರಾ ಮಹೋತ್ಸವ ಮುಕ್ತಾಯಗೊಳ್ಳುವುದು ಎಂದು ತಿಳಿಸಿದ್ದಾರೆ.

ಪ್ರಮುಖ ಸುದ್ದಿ

ರಾಜ್ಯದ ಶಿಕ್ಷಕರ ಕ್ಷೇತ್ರದ ಸಮಸ್ಯೆಗಳಿಗೆ ಪರಿಹಾರವನ್ನು ನೀಡಲು ಕಾಂಗ್ರೆಸ್‌ನಿಂದ ಮಾತ್ರ ಸಾಧ್ಯ

ವಿಧಾನಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ನಿಶ್ಚಿತ

» ಚಳ್ಳಕೆರೆ

ಕಳೆದ ಒಂದು ವರ್ಷದಿಂದ ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಹಲವಾರು ಜನಪರ ಯೋಜನೆಗಳ ಮೂಲಕ ಜನರ ವಿಶ್ವಾಸಗೆದ್ದಿದೆ.ಇತ್ತೀಚೆಗೆಮುಕ್ತಾಯಗೊಂಡ ಲೋಕಸಭಾ ಚುನಾವಣೆಯಲ್ಲೂ ಪಕ್ಷ ಹೆಚ್ಚು ಸ್ಥಾನಗಳಿಸಲಿದೆ. ಜೂನ್3ರಂದು ನಡೆಯುವ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್‌ಮೂರ್ತಿಯವರನ್ನು ಗೆಲ್ಲಿಸುವ ನಿಟ್ಟಿನಲ್ಲಿ ಪಕ್ಷದ ಎಲ್ಲಾ ಕಾರ್ಯಕರ್ತರು, ಮುಖಂಡರು ಕಾರ್ಯನಿರ್ವಹಿಸಿ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವ

ಶಿಕ್ಷಕರ ಹಿತರಕ್ಷಣೆಗೆ ಕೈ ಸರ್ಕಾರ ಬದ್ಧ

ಕೊಟ್ಟ ಮಾತುತಪ್ಪದ ಸಿಎಂ ಸಿದ್ದು– ಮಾಜಿ ಶಾಸಕಿ ಕೆ.ಪೂರ್ಣಿಮಾ ಅನಿಸಿಕೆ –ನಿವೃತ್ತ ಶಿಕ್ಷಕರು, ಮುಖಂಡರ ಸಭೆ

» ಚಿತ್ರದುರ್ಗ

ಶಿಕ್ಷಕರ ಹಿತಕಾಯುವಲ್ಲಿಕಾಂಗ್ರೆಸ್ ಸರ್ಕಾರದ ಬದ್ಧತೆ, ದೃಢ ನಿರ್ಧಾರ ಪ್ರಶ್ನಾತೀತಎಂದು ಮಾಜಿ ಶಾಸಕಿ ಕೆ.ಪೂರ್ಣಿಮಾಶ್ರೀನಿವಾಸ್ಹೇಳಿದರು.

ತಾಲೂಕಿನ ಸೀಬಾರದಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರದಕಾಂಗ್ರೆಸ್ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಪರ ಪ್ರಚಾರದ ಹಿನ್ನೆಲೆಯಲ್ಲಿ ಶನಿವಾರರಾತ್ರಿ ಹಮ್ಮಿಕೊಂಡಿದ್ದ ನಿವೃತ್ತ ಶಿಕ್ಷಕರು ಹಾಗೂ ಕಾಂಗ್ರೆಸ್ ಮುಖಂಡರ ಸಭೆಯಲ್ಲಿಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಈಗಾಗಲೇ ಕಾಂಗ್ರೆಸ್ ಸರ್ಕಾರ ವಿಧಾನಸಭಾಚುನಾವಣಾ ಸಂದರ್ಭ ನೀಡಿದಎಲ್ಲಭರವಸೆಗಳನ್ನು ಈಡೇರಿಸಿದೆ. ಜೊತೆಗೆ ಹಳೇ ಪಿಂಚಣಿ ವ್ಯವಸ್ಥೆ ಮರುಜಾರಿಗೆ ಸಿಎಂ ಸಿದ್ದರಾಮಯ್ಯ ಸಕಲ ಸಿದ್ಧತೆ ಕೈಗೊಂಡಿದ್ದಾರೆಎಂದರು.

ಕೊಟ್ಟ ಮಾತುತಪ್ಪದ ಸಿಎಂ ಎಂದೇ ನಾಡಿನಲ್ಲಿಖ್ಯಾತಿಗಳಿಸಿರುವಸಿದ್ದರಾಮಯ್ಯ,

ಈಗಾಗಲೇ ಶಿಕ್ಷಕರ 30 ಬೇಡಿಕೆಗಳಲ್ಲಿ ಹಲವನ್ನು ಈಡೇರಿಸಿದ್ದಾರೆ.ಮುಖ್ಯವಾಗಿ ಹಳೇ ಪಿಂಚಣಿ ಪದ್ಧತಿ ಮರುಜಾರಿಗೆ, 7ನೇ ವೇತನ, ಶಿಕ್ಷಕರಿಗೆ ಜೀವನ ಭದ್ರತೆಒದಗಿಸಲು ಮುಂದಾಗಿರುವುದು ಸರ್ಕಾರಿ ನೌಕರರ ಪಾಲಿಗೆ ಬಹುದೊಡ್ಡ ಸಿಹಿ ಸುದ್ದಿ ಆಗಲಿದೆಎಂದರು.

ಖಾಸಗಿಶಿಕ್ಷಣಸಂಸ್ಥೆಗಳಲ್ಲಿಖಾಲಿಇರುವ ಹುದ್ದೆಗಳ ನೇಮಕಾತಿಗೆಅನುಮೋದನೆ, ಉದ್ಯೋಗಕಾಯಂ ಸೇರಿದಂತೆ ಅನೇಕ ಬೇಡಿಕೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಈಡೇರಿಸಲಿದ್ದಾರೆಎಂದು ತಿಳಿಸಿದರು.

ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆಕಾಂಗ್ರೆಸ್ ಪಕ್ಷದಿಂದ ಸ್ಪರ್ಧೆ ಮಾಡಿರುವ ಡಿ.ಟಿ.ಶ್ರೀನಿವಾಸ್, ಕೆಎಎಸ್ಅಧಿಕಾರಿ ಹುದ್ದೆ ತ್ಯಜಿಸಿ ಸಾಮಾಜಿಕ ಸೇವಾ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಅಪರೂಪದರಾಜಕಾರಣಿ. ಅವರ ಗೆಲುವು ಶಿಕ್ಷಕ ವರ್ಗದ ಪರ ವಿಧಾನಪರಿಷತ್‌ನಲ್ಲಿಧ್ವನಿಯಾಗಲು ಸಹಕಾರಿಆಗಲಿದೆಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮಾಜಿ ಸಚಿವ ಎಚ್.ಆಂಜನೇಯ ಮಾತನಾಡಿ, ಎ.ಕೃಷ್ಣಪ್ಪಅಂತಹ ದಿಗ್ಗಜರಾಜಕಾರಣಿಯ ಕುಟುಂಬದ ಸದಸ್ಯ ಡಿ.ಟಿ.ಶ್ರೀನಿವಾಸ್, ಸರ್ಕಾರದಮಟ್ಟದಲ್ಲಿಹೆಚ್ಚುಪ್ರಭಾವಿ.ಅವರ ಗೆಲುವು ಶಿಕ್ಷಕರ ಬೇಡಿಕೆಗಳ ಈಡೇರಿಕೆಗೆ ಸುಲಭ ಹಾದಿ ಆಗಲಿದೆಎಂದರು.

ವಿದ್ಯಾವಂತ, ಸಹನಮೂರ್ತಿಆಗಿರುವ ಡಿ.ಟಿ.ಶ್ರಿನಿವಾಸ್, ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಅನುಭವ ಹೊಂದಿದ್ದು, ಶಿಕ್ಷಕರ ಸಮಸ್ಯೆಗಳ ಅರಿವುಅವರಲ್ಲಿದೆ. ಇಂತಹ ವ್ಯಕ್ತಿ ವಿಧಾನಪರಿಷತ್ ಪ್ರವೇಶಿಸಿದರೆ ಶಿಕ್ಷಕರ ಸಮಸ್ಯೆಗಳಿಗೆ ಶಾಶ್ವತ ಪರಿಹಾರದೊರೆಯಲಿದೆಎಂದು ಹೇಳಿದರು. ಜೊತೆಗೆರಾಜ್ಯದಲ್ಲಿ ನುಡಿದಂತೆ ನಡೆಯುವಕಾಂಗ್ರೆಸ್ ಪಕ್ಷವೇ ಆಡಳಿತದಲ್ಲಿದ್ದು, ಪಕ್ಷದಿಂದ ಸ್ಪರ್ಧಿಸಿರುವ ಶ್ರೀನಿವಾಸ್ ಪರಿಷತ್ ಸದಸ್ಯರಾಗುವುದರಿಂದ ಶಿಕ್ಷಕರು, ವಿದ್ಯಾವಂತಯುವಜನರಿಗೆ ಹೆಚ್ಚು ಅನುಕೂಲ ಆಗಲಿದೆ.ಆದ್ದರಿಂದಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಹೆಚ್ಚು ಮತಗಳ ಅಂತರದಲ್ಲಿ ಗೆಲ್ಲಿಸಿಕೊಳ್ಳಬೇಕು ಎಂದರು.ಮೂರು ವರ್ಷದಿಂದ ಶಿಕ್ಷಕರ ಸಮಸ್ಯೆ ಆಲಿಸಿ ಪಟ್ಟಿ ಮಾಡಿಕೊಂಡಿರುವ ಶ್ರೀನಿವಾಸ್, ಹಲವು ಬಾರಿ ಮುಖ್ಯಮಂತ್ರಿಗಳು ಹಾಗೂ ಸಂಬಂಧಿಸಿದ ಸಚಿವರನ್ನು ಭೇಟಿ ಮಾಡಿ ಬೇಡಿಕೆಈಡೇರಿಸುವಂತೆಒತ್ತಡತರುತ್ತಿದ್ದಾರೆ.ಪರಿಷತ್ ಸದಸ್ಯರಾದರೆಅವರ ಕೂಗು ಸರ್ಕಾರದ ಮಟ್ಟದಲ್ಲಿ ಬಲ ಪಡೆದುಕೊಂಡು, ಶಿಕ್ಷಕ ವರ್ಗಕ್ಕೆ ಅನುಕೂಲ ಆಗಲಿದೆಎಂದು ಹೇಳಿದರು.ಅಂಬೇಡ್ಕರ್ ವಿದ್ಯಾರ್ಥಿ ಪರಿಷತ್ ಅಧ್ಯಕ್ಷಡಾ.ಬಿ.ಪಿ.ತಿಪ್ಪೇಸ್ವಾಮಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಜಿಲ್ಲಾಧ್ಯಕ್ಷ ಶಿವಣ್ಣ ಹಾಗೂ ಶಿಕ್ಷಕ ಸಂಘದ ಪದಾಧಿಕಾರಿಗಳು, ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

ಅನ್ನದಾತನಿಂದ ಹೆಸರು ಸಾವೆ ಹಾಗೂ ಎಳ್ಳು ಬಿತ್ತನೆಗೆ ಭೂಮಿ ಸಿದ್ಧತೆ

4 ದಿನ ಹದ ಮಳೆಗೆ ತಾಲೂಕಿನ ರೈತರು ಫಿದಾ

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ: ಭೀಕರ ಬರಕ್ಕೆ ತತ್ತರಿಸಿದ್ದ ಬಯಲು ಸೀಮೆಯ ನಾಡು ಕಳೆದ ನಾಲ್ಕು ದಿನಗಳಿಂದ ಬರುತ್ತಿರುವ ಮಳೆಯ ಆಗಮನದಿಂದ ರೈತಾಪಿ ವರ್ಗಕ್ಕೆ ಸಮಾದಾನ ತಂದಿದೆ. ತಾಲೂಕಿನ ಎಲ್ಲೆಡೆ ಅಲ್ಲಲ್ಲಿ ಸಣ್ಣ ಪ್ರಮಾಣದ ಮಳೆಯಾಗುತ್ತಿದ್ದು ಸದ್ಯದ ಪರುಸ್ಥಿತಿಯಲ್ಲಿ ಹದವಾಗಿರುವ ಭೂಮಿಗೆ ರೈತ ವೃಂದದವರಿಂದ ಭೂಮಿಯನ್ನ ಹದಗೊಳಿಸುವ ಕಾರ್ಯ ಬಿತ್ತನೆಯ ಪೂರ್ವಕ್ಕೆ ಭೂಮಿ ಸಿದ್ದತೆ ಬಿರುಸಿನಿಂದ ಸಾಗಿದೆ.

ವರ್ಷಗಟ್ಟಲೆ ಮೂಲೆ ಗುಂಪಾಗಿ ಹಟ್ಟಿ ಸೇರಿದ್ದ ರೈತಾಪಿ ವರ್ಗದ ಪರಿಕರಗಳಿಗೆ ಇದೀಗ ಶುಕ್ರದಸೆ ಬಂದು ಎಲ್ಲಾ ಪರಿಕರಿಗಳೂ ಸಹಾ ಜಮೀನು ಕಡೆ ಮುಖ ಮಾಡುವಂತಾಗಿದೆ.

ಆದರೂ ಸಂವೃದ್ದ ಮಳೆ ಇಲ್ಲಾ, ಬಿತ್ತನೆ ಕಾರ್ಯ ಶುರು ಮಾಡಲು ಇನ್ನು ಸಾಕಷ್ಟು

ಮಳೆ ಬೇಕಾಗುತ್ತದೆ, ಹಳ್ಳ, ಕೊಳ್ಳಗಳು ತುಂಬಿ ಹರಿಯುತ್ತಿಲ್ಲ ಕೆರೆ ಕಟ್ಟೆಗಳಿಗೆ ನೀರು ಜಮಾಯಿಸಿಲ್ಲ, ನದಿ ಹಳ್ಳ ಕೊಳ್ಳಗಳು ಚೆಕ್ ಡ್ಯಾಂಗಳು, ಗೋಕಟ್ಟೆಗಳಿಗೆ ನೀರು ಬರುವಂತಹ ಮಳೆಯ ಅಗತ್ಯವಿದೆ.

ತಾಲ್ಲೂಕಿನಾದ್ಯಂತ ಕಳೆದ ನಾಲ್ಕು ದಿನಗಳಿಂದ ಹದ ಮಳೆಯಾಗಿದ್ದು, ರೈತರಿಗೆ ಸಂತಸ ನೀಡಿದೆ. ಒಂದು ವರ್ಷದಿಂದ ಮಳೆಯಾಗದೆ ಕಂಗಾಲಾಗಿದ್ದ ರೈತ, ಹದ ಮಳೆಯಿಂದಾಗಿ ಸಾಕಷ್ಟು ಮಂದಿ ರೈತರು ತಮ್ಮ ತಮ್ಮ ಭೂಮಿ ಸಿದ್ಧತೆ ಕಾರ್ಯದಲ್ಲಿ ತೊಡಗಿದ್ದಾರೆ.

ಹೊಸದುರ್ಗ ತಾಲ್ಲೂಕು ಸಿರಿಧಾನ್ಯ ಬೆಳೆಗೆ ಯೋಗ್ಯವಾಗಿದ್ದು, ರಾಜ್ಯ ಮಟ್ಟದಲ್ಲಿ ಹೆಸರುವಾಸಿಯಾಗಿದೆ. ಇಲ್ಲಿನ ಮಣ್ಣು, ಹವಾಗುಣ ಸಿರಿಧಾನ್ಯ ಬೆಳೆಗೆ ಯೋಗ್ಯವಾಗಿದೆ. ಹಾಗಾಗಿ ರೈತರು ಮಳೆಯಾದ ನಂತರ ಭೂಮಿ ಸಿದ್ಧತೆ ಹಾಗೂ ಬಿತ್ತನೆ ಕಾರ್ಯದಲ್ಲಿ ತೊಡಗುವರು.

ರೈತರು ಹೇಳುವ ಪ್ರಕಾರ ಇದೀಗ ಹೆಸರು ಸಾವೆ ಹಾಗೂ ಎಳ್ಳು ಬಿತ್ತನೆಗೆ ಭೂಮಿ ಸಿದ್ಧತೆ ಮಾಡಿಕೊಳ್ಳಲಾಗಿದೆ. ಈಗಾಗಲೇ ಮಳೆ ತಡವಾಗಿದೆ. ಕೂಡಲೇ ಮಳೆಯಾದರೆ ತಕ್ಷಣ ಬಿತ್ತನೆ ಕಾರ್ಯ ಮಾಡುತ್ತೇವೆ. ಈ ಬಾರಿಯಾದರೂ ಉತ್ತಮ ಮಳೆಯಾಗಿ, ಬೆಳೆ ಕೈ ಸೇರಿದರೆ ಸಾಕು ಎನ್ನುತ್ತಾರೆ ಮಳೆ ಇಲ್ಲದೆ ಬೆಳೆ ಬೆಳೆಯದೆ ನೊಂದು ಬೆಂದ ರೈತರು.

ಡಿ.ಟಿ.ಶ್ರೀನಿವಾಸ್ ಪರವಾಗಿ ಅರುಣ್ ಗೋವಿಂದಪ್ಪರಿಂದ ಮತ ಯಾಚನೆ

» ಹೊಸದುರ್ಗ

ಯುವ ಮುಖಂಡರಾದ ಬಿ.ಜಿ.ಅರುಣ್ ಗೋವಿಂದಪ್ಪ ನವರು ಆಗ್ನೇಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಡಿ.ಟಿ.ಶ್ರೀನಿವಾಸ್ ಅವರ ಪರವಾಗಿ ಗಣೇಶನಿಗೆ ಪೂಜೆ ಸಲ್ಲಿಸಿ ಮತ್ತೊಡು ಹೋಬಳಿಯ ವ್ಯಾಪ್ತಿಯಲ್ಲಿ ಶುಕ್ರವಾರ ಮತಯಾಚನೆ ಮಾಡಿದರು ಈ ಸಂಧರ್ಬದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅನಂತ ಪದ್ಮನಾಭ್, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಮೊಹಮ್ಮದ್ ಇಸ್ಮಾಯಿಲ್ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ನಿರ್ದೇಶಕ ತಿಪ್ಪೆಶ್, ಶಿಕ್ಷಕರಾದ ಆರ್.ಲಕ್ಷ್ಮಯ್ಯ ಮೋಹನ್ ಕುಮಾರ್, ಧನಂಜಯ್, ಮಹಾಂತೇಶ್ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರು ಕಾರ್ಯಕರ್ತರು ಭಾಗವಹಿಸಿದ್ದರು.

ಫಾಸ್ಟ್ ನ್ಯೂಸ್

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ

» ಹೊಸದುರ್ಗ

ವೀರಶೈವ ಪಂಚಮಸಾಲಿ ಲಿಂಗಾಯಿತ ಸಮಾಜದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಎಸ್ ಎಸ್ ಎಲ್ ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ನೀಡಲು ತೀರ್ಮಾನಿಸಲಾಗಿದೆ ಎಂದು ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಧನುಶಂಕರ್ ತಿಳಿಸಿದರು. ಪಟ್ಟಣದ ಸಮಾಜದ ಸಂಘದ ಕಚೇರಿಯಲ್ಲಿ ಭಾನುವಾರ ಕರೆಯಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಈ ಬಾರಿಯ ಚಿತ್ರದುರ್ಗ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಜೂನ್.30 ರಂದು ಹೊಸದುರ್ಗ ಪಟ್ಟಣದ ಜಯದೇವ ಸಮುದಾಯ ಭವನದಲ್ಲಿ ಆಯೋಜನೆ ಮಾಡಲಾಗುವುದು. ಸಮಾಜದ ಅರ್ಹ ವಿದ್ಯಾರ್ಥಿಗಳು ನಿಗದಿತ ನಮೂನೆಯಲ್ಲಿ ತುಂಬಿದ ಅರ್ಜಿಗಳನ್ನು ಆಯಾ ತಾಲೂಕುಗಳ ಸಮಾಜದ ಅಧ್ಯಕ್ಷರು, ಕಾರ್ಯದರ್ಶಿಗಳ ಕಡೆ ಜೂನ್ 15ರೊಳಗೆ ತಲುಪಿಸಲು ಕೋರಲಾಗಿದೆ. ಅರ್ಜಿ ನಮೂನೆಗಳು ಆಯಾ ತಾಲೂಕು ಸಂಘದ ಕಚೇರಿಯಲ್ಲಿ ದೊರೆಯಲಿದ್ದು ಅರ್ಜಿ ನಮೂನೆ ಜೊತೆಯಲ್ಲಿ ವಿದ್ಯಾರ್ಥಿಯ ಭಾವಚಿತ್ರ, ಅಂಕ ಪಟ್ಟಿಯ ನಕಲನ್ನು ಸಲ್ಲಿಸಲು ಕೋರಲಾಗಿದೆ. ಈ ವೇಳೆ ಸುದ್ದಿಗೋಷ್ಠಿಯಲ್ಲಿ ಸಮಾಜದ ಜಿಲ್ಲಾಧ್ಯಕ್ಷರಾದ ಜೆ.ಶಿವಪ್ರಕಾಶ್, ತಾಲೂಕು ಗೌರವಧ್ಯಕ್ಷ ಮೃತ್ಯುಂಜಯಪ್ಪ, ಜಿಲ್ಲಾ ಕಾರ್ಯದರ್ಶಿ ಧನುಶಂಕರ್, ತಾಲೂಕು ಅಧ್ಯಕ್ಷ ದಯಾನಂದ ಸೇರಿದಂತೆ ಇತರರಿದ್ದರು.

ಪಾರಂಪರಿಕ ಸ್ಮಾರಕ ಸಂರಕ್ಷಣೆಗೆ ಸಲಹೆ

» ದಾವಣಗೆರೆ

ಕರ್ನಾಟಕ ಇತಿಹಾಸದ ಶಾಸನಗಳು, ದೇವಾಲಯಗಳು, ಸ್ಮಾರಕಗಳು ಸೇರಿದಂತೆ ಸ್ಥಳಗಳಿದ್ದಲ್ಲಿ ಸಾರ್ವಜನಿಕರು ತಮ್ಮ ತಾಲ್ಲೂಕು, ಊರು, ಗ್ರಾಮಗಳಲ್ಲಿ ವಿನಾಶದ ಸ್ಥಿತಿಯಲ್ಲಿರುವ ದೇವಾಲಯಗಳು, ಶಾಸನಗಳು, ವೀರಗಲ್ಲುಗಳು, ಕೋಟೆಗಳು, ಬತೇರಿಗಳ ಕಂಡುಬಂದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಮಾಹಿತಿ ಒದಗಿಸಿದ್ದಲ್ಲಿ. ಮೈಸೂರು ಪ್ರಾಚ್ಯವಸ್ತು ಸಂಗ್ರಹಾಲಯ ಮತ್ತು ಪಾರಂಪರಿಕ ಇಲಾಖೆ ಆಯುಕ್ತರು, ಇವರ ಗಮನಕ್ಕೆ ತರಬೇಕು. ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆ ಕಚೇರಿಯ ದೂರವಾಣಿ ಸಂಖ್ಯೆ:08192–230123 ಕರೆ ಮಾಡಲು ಅಥವಾ ಭೇಟಿ ನೀಡಿ ಮಾಹಿತಿ ಪಡೆಯಲು ತಿಳಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T